ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

EMAIL : dairyadadaari@gmail.com ಸಂಪುಟ: 01 ಸಂಚಿಕೆ: 124

ಬೆಲೆ ರೂ : 2.00

ರಾಯಚೂರು

ಪುಟ: 4

RNI NO: KNKAN/25/A2795 ಬುಧವಾರ: 22–04–2026

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

## ಕೈ ನಾಯಕರ ಗುರಿಯಾಗಿರಿಸಿ ಇಡಿ ದಾಳಿ: ಸಿಎಂ ಕಿಡಿ

**ಬೆಂಗಳೂರು, ಏ. 21–** ಕೇಂದ್ರದ ಜಾರಿ ನಿರ್ದೇಶನಾಲಯ ಕಾಂಗ್ರೆಸ್ ನಾಯಕರನ್ನೆ ಗುರಿಯಾಗಿಸಿ ದಾಳಿ ನಡೆಸುತ್ತಿದೆ. ಬಿಜೆಪಿ ನಾಯಕರ ವಿರುದ್ಧ ದಾಳಿ ನಡೆಯುತ್ತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.



ಬಿಟ್ ಕಾಯಿನ್ ಹಗರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಶಾಸಕ ಎನ್.ಎ. ಹ್ಯಾರೀಸ್ ಹಾಗೂ ಅವರ ಪುತ್ರನ ನಿವಾಸಗಳ ಮೇಲೆ ನಡೆದಿರುವ ದಾಳಿ ಬಗ್ಗೆ ಚಾಮರಾಜನಗರದ ಗುಂಡ್ಲುಪೇಟೆಯಲ್ಲಿಂದು ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಯಾವುದೇ ಹಗರಣವಾದರೂ ಕಾಂಗ್ರೆಸ್ ನಾಯಕರ ಮನೆ ಮೇಲೆ ಇ.ಡಿ. ದಾಳಿ ನಡೆಸುತ್ತದೆ. ಬಿಜೆಪಿ ನಾಯಕರ ವಿರುದ್ಧ ದಾಳಿ ನಡೆಸಲ್ಲ ಎಂದು ಟೀಕಿಸಿದರು.

ಚಾಮರಾಜನಗರದಲ್ಲಿ ಹಿಂದೆ ಕೊರೊನಾ ಸಂದರ್ಭದಲ್ಲಿ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟ ಸಂತ್ರಸ್ತರಿಗೆ ನೆರವು ನೀಡುವ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಿದ್ದೇನೆ. ಈ ದುರಂತಕ್ಕೆ ಕಾರಣರಾದವರ ವಿರುದ್ಧ ಕ್ರಮ ಆಗಿಲ್ಲದಿರುವ ಬಗ್ಗೆ ಅಧಿಕಾರಿಗಳ ಜತೆ ಚರ್ಚೆ ನಡೆಸುತ್ತೇನೆ ಎಂದು ಅವರು ಹೇಳಿದರು.


ರಾಜ್ಯದ ಕಾಂಗ್ರೆಸ್ ನಾಯಕರ ವಿರುದ್ಧ ಮುಸ್ಲಿಂ ನಾಯಕರು ಹೈಕಮಾಂಡ್‌ಗೆ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅಲ್ಪಸಂಖ್ಯಾತ ನಾಯಕರ ಸಮ್ಮುಖದಲ್ಲೇ ಉಪಚುನಾವಣೆಗೆ ಅಭ್ಯರ್ಥಿ ಆಯ್ಕೆ ಮಾಡಲಾಗಿತ್ತು. ನಂತರ ಅಲ್ಪಸಂಖ್ಯಾತರ ಮುಖಂಡರು ಪಕ್ಷದ ಪರ ಕೆಲಸ ಮಾಡಿಲ್ಲ ಎಂದು ಕ್ರಮ ಆಗಿದೆ. ಹೈಕಮಾಂಡ್‌ಗೆ ಎಲ್ಲಾ ಮಾಹಿತಿ ಇದೆ ಎಂದು ತಿಳಿಸಿದರು.

ಮಹಿಳಾ ಮೀಸಲಾತಿ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ. ಕಾಂಗ್ರೆಸ್ ಪಕ್ಷ ಎಂದೂ ಮಹಿಳಾ ಮೀಸಲಾತಿ ವಿರೋಧಿಯಲ್ಲ. ಈ ಹಿಂದೆ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಲು ರಾಜೀವ್‌ಗಾಂಧಿಯವರು ಸಂವಿಧಾನದ 73 ಮತ್ತು 74ನೇ ಪರಿಚ್ಛೇಧಗಳಿಗೆ ತಿದ್ದುಪಡಿ ತಂದಾಗ ಅದನ್ನು ರಾಜ್ಯಸಭೆಯಲ್ಲಿ ವಿರೋಧಿಸಿದವರು ಇದೇ ಎನ್‌ಡಿಎ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಮಹಿಳಾ ಮೀಸಲಾತಿಗೆ ವಿರೋಧ ವ್ಯಕ್ತಪಡಿಸಿಲ್ಲ. ಕ್ಷೇತ್ರ ಪುನರ್ ವಿಂಗಡಣೆಗೆ ಮಾತ್ರ ನಮ್ಮ ವಿರೋಧ ಎಂದು ಹೇಳಿದರು.

ಚಾಮರಾಜನಗರಕ್ಕೆ ಬಂದರೆ ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬುದನ್ನು ನಾನು ಸುಳ್ಳು ಮಾಡಿದ್ದೇನೆ. ಹಲವು ಬಾರಿ ನಾನು ಚಾಮರಾಜನಗರಕ್ಕೆ ಬಂದು ಹೋಗಿದ್ದೇನೆ. ಮಲೈಮಹದೇಶ್ವರಬೆಟ್ಟಕ್ಕೂ ಭೇಟಿ ನೀಡಿದ್ದೇನೆ. ಅಧಿಕಾರ ಏನೂ ಹೋಗಿಲ್ಲ. ಇದೆಲ್ಲಾ ಮೌಢ್ಯ ಎಂದು ಹೇಳಿದರು.

## ಇಂದಿನಿಂದ ಸಿಇಟಿ ಪರೀಕ್ಷೆ 3.30 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳ ನೋಂದಣಿ




**ಬೆಂಗಳೂರು, ಏ.21 :** ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆ (ಯುಜಿಸಿಇಟಿ –2026) ಸಂಬಂಧಿಸಿದಂತೆ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್. ಪ್ರಸನ್ನ ಅವರು ಅಭ್ಯರ್ಥಿಗಳಿಗೆ ಮತ್ತು ಪೋಷಕರಿಗೆ ಕೆಲವು ಪ್ರಮುಖ ಮಾರ್ಗಸೂಚಿಗಳನ್ನು ನೀಡಿದ್ದಾರೆ.ಈ ಬಾರಿಯ ಪರೀಕ್ಷೆಯು ರಾಜ್ಯದಾದ್ಯಂತ 745 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಸುಮಾರು 3,30,000 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.

1. ಪರೀಕ್ಷಾ ಸಿದ್ಧತೆ ಮತ್ತು ಪ್ರವೇಶಾತಿ ಪತ್ರ: ಎಲ್ಲಾ ಅಭ್ಯರ್ಥಿಗಳು ಈಗಾಗಲೇ ಹಾಲ್ ಟಿಕೆಟ್ (ಪ್ರವೇಶಾತಿ ಪತ್ರ) ಡೌನ್ಲೋಡ್ ಮಾಡಿಕೊಂಡಿರಬೇಕು. ಒಂದು ವೇಳೆ ಮಾಡದಿದ್ದರೆ ತಕ್ಷಣವೇ ಮಾಡಿಕೊಳ್ಳಲು ಸೂಚಿಸಲಾಗಿದೆ. ಹಾಲ್ ಟಿಕೆಟ್ ಜತೆಗೆ ನೀಡಲಾಗಿರುವ ಸೂಚನೆಗಳನ್ನು ಕನಿಷ್ಠ 10 ನಿಮಿಷಗಳ ಕಾಲ ಗಮನವಿಟ್ಟು ಓದಬೇಕು. 2. ಓಎಂಆರ್ ಶೀಟ್ ಅಭ್ಯಾಸ: ಅಭ್ಯರ್ಥಿಗಳ ಅನುಕೂಲಕ್ಕಾಗಿ ಪ್ರಾಕ್ಟೀಸ್ ಓಎಂಆರ್ ಶೀಟ್ ಅನ್ನು ವೆಬ್‌ಸೈಟ್‌ನಲ್ಲಿ ನೀಡಲಾಗಿದೆ. ಪರೀಕ್ಷೆಯ ದಿನ ಗೊಂದಲವಾಗದಂತೆ ಮೊದಲೇ ಅಭ್ಯಾಸ ಮಾಡಲು ಸಲಹೆ ನೀಡಲಾಗಿದೆ. ಆದರೆ, ಈ ಪ್ರಾಕ್ಟೀಸ್ ಓಎಂಆರ್ ಶೀಟ್ ಅನ್ನು ಪರೀಕ್ಷಾ ಕೇಂದ್ರಕ್ಕೆ ತೆಗೆದುಕೊಂಡು ಹೋಗುವ ಅಗತ್ಯವಿಲ್ಲ.

3. ಕಟ್ಟುನಿಟ್ಟಿನ ಡ್ರೆಸ್ ಕೋಡ್: ಪರೀಕ್ಷೆಯಲ್ಲಿ ಪಾರದರ್ಶಕತೆ ಕಾಪಾಡಲು ಸರಳವಾದ ಡ್ರೆಸ್ ಕೋಡ್ ಅನುಸರಿಸಬೇಕು. ಏನಿರಬಾರದು: ಫುಲ್ ಸ್ಲೀವ್ ಶರ್ಟ್, ಕಿವಿ ಮುಚ್ಚುವಂತಹ ಬಟ್ಟೆಗಳು, ದೊಡ್ಡದಾದ ಲೆದರ್ ಶೂಗಳು ಮತ್ತು ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳಿಗೆ ಅವಕಾಶವಿಲ್ಲ. ಅಭ್ಯರ್ಥಿಗಳು ಡ್ರೆಸ್ ಕೋಡ್ ಬಗ್ಗೆ ಅನಗತ್ಯ ಟೆನ್ಶನ್ ಮಾಡಿಕೊಳ್ಳದೆ ಸರಳವಾಗಿ ಪರೀಕ್ಷೆಗೆ ಹಾಜರಾಗಲು ಕೋರಲಾಗಿದೆ.

4. ಬಯೋಮೆಟ್ರಿಕ್ ಮತ್ತು ಫೋಟೋ ಪರಿಶೀಲನೆ: ಪರೀಕ್ಷಾ ಕೇಂದ್ರದಲ್ಲಿ ಅಪ್ಲೋಡ್ ಮಾಡಲಾದ ಫೋಟೋ ಮತ್ತು ಲೈವ್ ಫೋಟೋವನ್ನು ಕ್ಯೂಆರ್ ಕೋಡ್ ಸ್ಕ್ಯಾನ್ ಮೂಲಕ ಪರಿಶೀಲಿಸಲಾಗುತ್ತದೆ. ಬದಲಿ ಅಭ್ಯರ್ಥಿಗಳನ್ನು ತಡೆಯಲು ಈ ಕ್ರಮ ಕೈಗೊಳ್ಳಲಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಕ್ಕೆ ಸ್ವಲ್ಪ ಬೇಗ ತಲುಪಬೇಕು. 5. ಪರೀಕ್ಷಾ ಕೇಂದ್ರದ ನಿಯಮಗಳು: ಪರೀಕ್ಷಾ ಕೇಂದ್ರದ ಒಳಗೆ ನೀರಿನ ಬಾಟಲಿ ಅಥವಾ ಆಹಾರ ಪದಾರ್ಥಗಳನ್ನು ತರುವಂತಿಲ್ಲ. ಕುಡಿಯುವ ನೀರಿನ ವ್ಯವಸ್ಥೆಯನ್ನು ಪ್ರಾಧಿಕಾರವೇ ಮಾಡಿದೆ. ಮೊಬೈಲ್ ಅಥವಾ ಬೆಲೆಬಾಳುವ ವಸ್ತುಗಳನ್ನು ತರಬಾರದು, ಏಕೆಂದರೆ ಅವುಗಳನ್ನು ಇಡಲು ಯಾವುದೇ ಪ್ರತ್ಯೇಕ ವ್ಯವಸ್ಥೆ ಇರುವುದಿಲ್ಲ.

## ತೊಗಟವೀರ ಕ್ಷತ್ರಿಯ ಸಮಾಜದಿಂದ ಶ್ರೀ ಚೌಡೇಶ್ವರಿ ದೇವಿಯ ಜ್ಯೋತಿಉತ್ಸವ ಮೆರವಣಿಗೆ



ಧೈರ್ಯದ ದಾರಿ

**ಮಾನ್ವಿ :** ಪಟ್ಟಣದ ತೊಗಟವೀರ ಕ್ಷತ್ರಿಯ ಸಮಾಜದ ಶ್ರೀ ಚೌಡೇಶ್ವರಿ ದೇವಿಯ 39ನೇಯ ವಾರ್ಷಿಕ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀ ಚೌಡೇಶ್ವರಿ ದೇವಿಯ ದೇವಸ್ಥಾನದ ಆವರಣದಲ್ಲಿ ಮಂಗಳವಾರ ಬೆಳಿಗ್ಗೆ 3–44 ನಿಮಿಷದ ಧನಸ್ಸು ಲಗ್ನದ ಶುಭಮುಹರ್ತದಲ್ಲಿ ಶ್ರೀ ಚೌಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಸಾಂಪ್ರದಾಯಿಕವಾಗಿ ಅಲಂಕರಿಸಿದ ನೂರಾರು ಜ್ಯೋತಿಗಳನ್ನು ಬೆಳಗಿಸಿಕೊಂಡು ತೊಗಟವೀರ ಕ್ಷತ್ರಿಯ ಸಮಾಜದ ನೂರಾರು ಯುವಕರು ಕೇಸರಿ ವಸ್ತ್ರ ಧರಿಸಿ, ಶರೀರದ ಮೇಲೆ ಧಾರ್ಮಿಕ ಚಿಹ್ನೆಗಳನ್ನು ಧರಿಸಿಕೊಂಡು ಶ್ರದ್ಧೆಯಿಂದ ತಮ್ಮ ತಲೆಯ ಮೇಲೆ ಜ್ಯೋತಿಗಳನ್ನು ಹೊತ್ತು ಪಟ್ಟಣದ ಪ್ರಮುಖ ಬೀದಿಗಳ ಮೂಲಕ ಶ್ರೀ ಚೌಡೇಶ್ವರಿ ದೇವಿಯ ದೇವಸ್ಥಾನದವರೆಗೆ ಜ್ಯೋತಿ ಉತ್ಸವದ ಮೆರವಣಿಗೆ ನಡೆಯಿತು. ಭಕ್ತರು ತಮ್ಮ ಮನೆಗಳ ಹತ್ತಿರ ಬರುವ ಶ್ರೀ ಚೌಡೇಶ್ವರಿ ದೇವಿಯಜ್ಯೋತಿಗೆ ಭಕ್ತಿಭಾವದಿಂದ ಪೂಜೆ ಸಲ್ಲಿಸಿದರು.

ಬೆಳಿಗ್ಗೆ ಶ್ರೀ ಚೌಡೇಶ್ವರಿ ದೇವಿಯ ದೇವಸ್ಥಾನದ ಆವರಣದಿಂದ ಪ್ರಾರಂಭವಾಗುವ ಜ್ಯೋತಿ ಉತ್ಸವದ ಮೆರವಣಿಗೆ ಪಟ್ಟಣದ ವಿವಿಧ ವಾರ್ಡಗಳಲ್ಲಿ ಸಂಚರಿಸಿ ಭಕ್ತರಿಂದ ಪೂಜೆ ಸ್ವೀಕರಿಸಿ ಮರಳಿ ದೇವಸ್ಥಾನಕ್ಕೆ ಸೇರಿಕೊಂಡವು ಸಾವಿರಾರು ಭಕ್ತರು ಜ್ಯೋತಿ ಉತ್ಸವದಲ್ಲಿ ಭಾಗವಹಿಸಿದರು.

## ಏ.24 ರಿಂದ ಪಟ್ಟಣದ ವಂಶವೃಕ್ಷ ಆಸ್ಪತ್ರೆಯಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ಸಿಂಧನೂರು ರಸ್ತೆಯಲ್ಲಿನ ನೂತನ ವಂಶವೃಕ್ಷ ಆಸ್ಪತ್ರೆ ಏ.23 ರಂದು ಪ್ರಾರಂಭವಾಗಲಿದು ಪ್ರಾರಂಭೋತ್ಸವ ಅಂಗವಾಗಿ ಏ.24 ರಿಂದ ಏ.30 ರವರೆಗೆ ಬೆಳಿಗ್ಗೆ 10 ರಿಂದ ಸಂಜೆ 5ರವರೆಗೆ ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ತಜ್ಞ ವೈದ್ಯರಿಂದ ಹಮ್ಮಿಕೊಳ್ಳಲಾಗಿದೆ. ಆರೋಗ್ಯ ಶಿಬಿರದಲ್ಲಿ ಉಚಿತವಾಗಿ ರಕ್ತದೊತ್ತಡ ಮತ್ತು ಮಧುಮೇಹ ಪರೀಕ್ಷೆ, ಹಿಮಗ್ಲೋಬಿನ್ ಪರೀಕ್ಷೆ ,ಇ.ಸಿ.ಜಿ. ಪರೀಕ್ಷೆ ನಡೆಸಲಾಗುವುದು ವೈದ್ಯರು ಸೂಚಿಸಿದ ಹೆಚ್ಚಿನ ರಕ್ತ ಪರೀಕ್ಷೆ ಹಾಗೂ ಎಕ್ಸೆಗಳಿಗೆ ಶೇ 50 ರಷ್ಟು ರಿಯಾಯಿತಿ ನೀಡಲಾಗುವುದು ಆರೋಗ್ಯ ಶಿಬಿರದಲ್ಲಿ, ಡಾ.ಪೃಥ್ವಿ ವರ್ಮಾ ಮಕ್ಕಳ ತಜ್ಞರು,ಡಾ.ವಿನೋದ್ ಪಾಟೀಲ್, ಡಾ.ಪವನ್ ಕುಮಾರ್.ಎನ್ ,ಡಾ.ಸಾಯಿವಂಶಿ ಎಲುಬು ಮತ್ತು ಕೀಲು ತಜ್ಞರು, ಡಾ.ಆಸಿಫ್ ಶಸ್ತ್ರ ಚಿಕಿತ್ಸ ತಜ್ಞರು, ಡಾ.ಪವನ್ ಕುಮಾರ್ ,ಎಂ. ಮೂತ್ರಕೋಶ ತಜ್ಞರು, ಭಾಗವಹಿಸಲಿದ್ದಾರೆ. ಸಾರ್ವಜನಿಕರು ಉಚಿತ ಆರೋಗ್ಯ ತಪಾಸಣೆ ಶಿಬಿರವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಡಾ.ದೇವರಾಜ ವರ್ಮಾ ಸ್ತ್ರೀರೋಗ ತಜ್ಞರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಡಾ.ರಾಜಕುಮಾರ್ ಜಯಂತಿ ಅರ್ಥಪೂರ್ಣ ಆಚರಣೆ: ಎಡಿಸಿ ಶಿವಾನಂದ



ಧೈರ್ಯದ ದಾರಿ

**ರಾಯಚೂರು :** ನಟ ಸಾರ್ವಭೌಮ, ವರನಟ ಡಾ.ರಾಜ್ ಕುಮಾರ್ ಅವರ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಪ್ರತಿ ವರ್ಷದಂತೆ ಈ ವರ್ಷವು ಇದೇ ಏ.24 ರಂದು ಅರ್ಥಪೂರ್ಣವಾಗಿ ಆಚರಿಸಲಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಹೇಳಿದರು.

ಏಪ್ರಿಲ್ 24ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಡಾ.ರಾಜಕುಮಾರ ಜಯಂತಿ ಅರ್ಥಪೂರ್ಣವಾಗಿ ಆಚರಿಸುವ ಕುರಿತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಅವರು ಮಾತನಾಡಿದರು.


ಡಾ. ರಾಜಕುಮಾರ್ ಅಭಿಮಾನಿಗಳನ್ನು ಈ ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ವಿಶೇಷ ಉಪನ್ಯಾಸಕರನ್ನು ಕರೆಸಿ ಡಾ. ರಾಜಕುಮಾರ ಅವರ ಜೀವನ ಹಾಗೂ ಸಾಧನೆಗಳ ಕುರಿತು ವಿಶೇಷ ಉಪನ್ಯಾಸ ನೀಡುವಂತಾಗಬೇಕು. ಪ್ರತಿ ವರ್ಷದಂತೆ ಈ ವರ್ಷ ರಾಯಚೂರು ನಗರದ ಕನ್ನಡ ಭವನದಲ್ಲಿ ಏಪ್ರಿಲ್ 24ರ ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜನೆ ಮಾಡಬೇಕು ಎಂದರು.

ಅಂದು ಬೆಳಿಗ್ಗೆ ಡಾ. ರಾಜಕುಮಾರ ಅವರ ಭಾವಚಿತ್ರಕ್ಕೆ ಪುಷ್ಪ ನಮನ, ಅವರ ಚಲನಚಿತ್ರ ಗೀತೆಗಳ ಗಾಯನ, ಡಾ. ರಾಜಕುಮಾರ ಕುರಿತು ಇತರೆ ಕಾರ್ಯಕ್ರಮಗಳನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ ರಾಯಚೂರು ಸೇರಿದಂತೆ ಇತರೆ ಡಾ.ರಾಜಕುಮಾರ ಅಭಿಮಾನಿ ಬಳಗ, ಕಲಾ ತಂಡಗಳ ಸಹಯೊಗದೊಂದಿಗೆ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರಾಯಚೂರಿನ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಸುರೇಶ ಜಿ, ವಾರ್ತಾ ಇಲಾಖೆಯ ಸಿಬ್ಬಂದಿಗಳಾದ ಎ.ಪ್ರಕಾಶ್, ರಮೇಶ ಗೌಡೂರು ಜಾಲಹಳ್ಳಿ ಸೇರಿದಂತೆ ಇತರರು ಉಪಸ್ಥಿತರಿದ್ದರು

## ಜಿಲ್ಲಾಡಳಿತದಿಂದ ಏಪ್ರಿಲ್ 23ರಂದು ಶ್ರೀ ಭಗೀರಥ ಜಯಂತಿ

ಧೈರ್ಯದ ದಾರಿ



**ರಾಯಚೂರು :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಏಪ್ರಿಲ್ 23ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ 2ನೇಪುಟಕ್ಕೆ

## ಶಾಸಕರ ವಿಶ್ವಾಸಕ್ಕೆ ಪಡೆದು ವಾರ್ಡ್ ವಿಂಗಡಣೆ: ಡಿ.ಕೆ.ಶಿ

**ಬೆಂಗಳೂರು, ಏ.21–**"ಪ್ರಜಾಪ್ರಭುತ್ವ ವ್ಯವಸ್ಥೆಗೆ ಅನುಗುಣವಾಗಿ ವಿರೋಧ ಪಕ್ಷದ ಶಾಸಕರು, ಸಾರ್ವಜನಿಕರನ್ನು ವಿಶ್ವಾಸಕ್ಕೆ ಪಡೆದು ಜಿಬಿಎ ಪಾಲಿಕೆಗಳು ಹಾಗೂ ವಾರ್ಡ್ ಗಳ ಮರುವಿಂಗಡಣೆ ಮಾಡಲಾಗಿದೆ. ಆದರೆ ಈ ಬಗ್ಗೆ ಕುಮಾರಸ್ವಾಮಿ ಅವರಿಗೆ ಅರಿವಿಲ್ಲ. ಬೇಕಿದ್ದರೇ ಅವರ ಶಾಸಕರನ್ನೇ ಕೇಳಿ ತಿಳಿದುಕೊಳ್ಳಲಿ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿರುಗೇಟು ನೀಡಿದ್ದಾರೆ.



ಸದಾಶಿವನಗರ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರುಕೇಂದ್ರ ಸರ್ಕಾರದ ಲೋಕಸಭಾ ಕ್ಷೇತ್ರ ಮರುವಿಂಗಡಣೆ ವಿಧೇಯಕ ಸಮರ್ಥಿಸಿಕೊಳ್ಳುವ ಭರದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಬೆಂಗಳೂರು ಪಾಲಿಕೆಗಳ ವಾರ್ಡ್ ಮರುವಿಂಗಡಣೆ ಬಗ್ಗೆ ಯಾರೊಂದಿಗೂ ಚರ್ಚೆ ನಡೆಸಿಲ್ಲ ಎಂದು ಮಾಡಿರುವ ಆರೋಪದ ಬಗ್ಗೆ ಕೇಳಿದಾಗ, "ಬೆಂಗಳೂರು ವಾರ್ಡ್ ಗಳ ಮರುವಿಂಗಡಣೆ ವೇಳೆ ಎಲ್ಲಾ ಪಕ್ಷದ ಶಾಸಕರನ್ನು ಒಳಗೊಂಡ ಸಮಿತಿ ರಚಿಸಲಾಗಿತ್ತು. ಅವರ ಪಕ್ಷದ ಶಾಸಕರು ಸಮಿತಿಯ ಭಾಗವಾಗಿದ್ದರು. ಜೆಡಿಎಸ್ ಹಾಗೂ ಬಿಜೆಪಿ ಶಾಸಕರ ಜತೆ ಚರ್ಚೆ ಮಾಡಿ, ಅವರೆಲ್ಲರ ಅಭಿಪ್ರಾಯ ಪಡೆದ ನಂತರವೇ ಅಂತಿಮ ತೀರ್ಮಾನ ಮಾಡಲಾಗಿದೆ" ಎಂದರು.

"ಕುಮಾರಸ್ವಾಮಿ ಅವರು ದೊಡ್ಡ ವ್ಯಕ್ತಿ ಇರಬಹುದು. ನನಗೂ ಸಣ್ಣ ಅನುಭವವಿದೆ. ಈ ಅನುಭವದ ಮೇಲೆ ಹೇಗೆ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ಶಾಸಕರು, ನಾಯಕರನ್ನು ಹೇಗೆ ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂಬುದು ನನಗೂ ಗೊತ್ತಿದೆ. ನಾನು ಅವರ ಶಾಸಕರ ಜತೆ ಎಷ್ಟು ಗಂಟೆಗಳ ಕಾಲ ಚರ್ಚೆ ಮಾಡಿದ್ದೇನೆ, ಎಷ್ಟು ಗಂಟೆಗಳ ಕಾಲ ಸಾರ್ವಜನಿಕರೊಂದಿಗೆ ಸಂವಾದ ಮಾಡಲಾಗಿದೆ ಎಂದು ಕುಮಾರಸ್ವಾಮಿ ಅವರು ತಿಳಿದುಕೊಂಡು ಮಾತನಾಡುವುದು ಸೂಕ್ತ" ಎಂದು ಛೇಡಿಸಿದರು.

ಜಿಬಿಎ ಪಾಲಿಕೆಗಳ ಚುನಾವಣೆ ಯಾವಾಗ ನಡೆಯಲಿದೆ ಎಂದು ಕೇಳಿದಾಗ, "ನಾವು ಚುನಾವಣೆಗೆ ಸಿದ್ಧವಿರುವುದಾಗಿ ತಿಳಿಸಿದ್ದೇವೆ. ಉಳಿದಂತೆ ಆ ಪ್ರಕ್ರಿಯೆ ನಡೆಸಲು ರಾಜ್ಯ ಚುನಾವಣಾ ಆಯೋಗವಿದೆ, ನ್ಯಾಯಾಲಯವಿದೆ" ಎಂದು ತಿಳಿಸಿದರು.

ಮುಸಲ್ಮಾನರ ಬಗ್ಗೆ ಹಗೆ ಸುಳ್ಳು ಆರೋಪ

ಮುಸಲ್ಮಾನ ಸಮುದಾಯದ ಮುಖಂಡರು ಹೈಕಮಾಂಡ್ ನಾಯಕರಿಗೆ ಪತ್ರ ಬರೆದು ಸಮುದಾಯದ ಮೇಲೆ ಹಗೆ ಸಾಧಿಸಲಾಗುತ್ತಿದೆ ಎಂದು ಆರೋಪ ಮಾಡಿರುವ ಬಗ್ಗೆ ಕೇಳಿದಾಗ, "ಅದೆಲ್ಲ ಸುಳ್ಳು. ಯಾರೂ ಹಗೆ ಸಾಧಿಸುತ್ತಿಲ್ಲ. ಪಕ್ಷವು ಶಿಸ್ತು ಪಾಲನೆಗೆ ಆದ್ಯತೆ ನೀಡುತ್ತಿದೆ. ಎಲ್ಲರೂ ಶಿಸ್ತು ಅಳವಡಿಸಿಕೊಳ್ಳಬೇಕು" ಎಂದು ತಿಳಿಸಿದರು.ಬೇಸಿಗೆ ಹಿನ್ನೆಲೆಯಲ್ಲಿ ಬೆಂಗಳೂರು ನಗರದಲ್ಲಿ ನೀರಿನ ಸಮಸ್ಯೆ ನಿರ್ವಹಣೆ ಬಗ್ಗೆ ಕೇಳಿದಾಗ, "ಈ ವಿಚಾರವಾಗಿ ಈಗಾಗಲೇ ಬಿಡಬ್ಲ್ಯೂಎಸ್‌ಎಸ್ ಬಿ ಅಧಿಕಾರಿಗಳ ಜತೆ ಚರ್ಚೆ ನಡೆಸಲಾಗಿದೆ. ಅಂತರ್ಜಲ ಹೆಚ್ಚಳದ ಬಗ್ಗೆ ಮಾತನಾಡಿದ್ದು, ಏನೇ ಸಮಸ್ಯೆ ಬಂದರೂ ನಾವು ಅದನ್ನು ಸಮರ್ಥವಾಗಿ ನಿಭಾಯಿಸುತ್ತೇವೆ" ಎಂದು ತಿಳಿಸಿದರು.

**ಮೊದಲನೇ ಪುಟದಿಂದ**

## ಜಿಲ್ಲಾಡಳಿತದಿಂದ ಏಪ್ರಿಲ್ 23ರಂದು ಶ್ರೀ ಭಗೀರಥ ಜಯಂತಿ

ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಉಪ್ಪಾರ ಸಮಾಜದ ಜಿಲ್ಲಾಧ್ಯಕ್ಷ ಪಾಗುಂಟಪ್ಪ ಮಿರ್ಜಾಪುರ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ.

ಬಾಗಲಕೋಟೆಯ ಉಪನ್ಯಾಸಕರು ಹಾಗೂ ಯೋಗ ಶಿಕ್ಷಕರಾದ ರಾಘವೇಂದ್ರ ನೀಲನ್ನವರ ಅವರು ಶ್ರೀ ಭಗೀರಥ ಜಯಂತಿ ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಚನ ಸಾಹಿತ್ಯ ಮತ್ತು ನಿರ್ವಹಣಾ ಶಾಸ್ತ್ರ ಸಂಶೋಧನೆಗಾಗಿ ಸಿಯುಕೆ ಪ್ರಾಧ್ಯಾಪಕರಿಗೆ ಐಸಿಎಸ್ಎಸ್ಆರ್ ಅನುದಾನ



**ಕಲಬುರಗಿ:ಏ.21:**"ಭಾರತೀಯ ಜ್ಞಾನ ವ್ಯವಸ್ಥೆಯ ಮೂಲಕ ನಿರ್ವಹಣಾ ಚಿಂತನೆಯನ್ನು ಪ್ರವರ್ಧಮಾನಕ್ಕೆ ತರುವುದು: ವಚನ ಸಾಹಿತ್ಯ ಮತ್ತು ಭಾರತೀಯ ಸಂಸ್ಥೆಗಳ ಅಧ್ಯಯನ" ಎಂಬ ಸಂಶೋಧನಾ ಪ್ರಸ್ತಾವನೆಗಾಗಿ ನವದೆಹಲಿಯ ಭಾರತೀಯ ಸಮಾಜ ವಿಜ್ಞಾನ ಸಂಶೋಧನಾ ಮಂಡಳಿ (ಐಸಿಎಸ್ಎಸ್ಆರ್) ರೂ. 16 ಲಕ್ಷ ಅನುದಾನದೊಂದಿಗೆ ಪ್ರಮುಖ ಸಂಶೋಧನಾ ಯೋಜನೆಯನ್ನು ಸಿಯುಕೆಯ ನಿರ್ವಹಣಾ ಶಾಸ್ತ್ರದ ಸಹ-ಪ್ರಾಧ್ಯಾಪಕ ಡಾ. ಗಣಪತಿ ಬಿ ಸಿನ್ನೂರ ಮತ್ತು ನಾಗ್ಪುರದ ಐಐಎಂನ ಸಹಾಯಕ ಪ್ರಾಧ್ಯಾಪಕಿ ಡಾ. ರಂಜಿತಾ ಜಿಪಿ ಅವರಿಗೆ ಮಂಜೂರು ಮಾಡಿದೆ. ಈ ನಿಟ್ಟಿನಲ್ಲಿ ಐಸಿಎಸ್ಎಸ್ಆರ್, ನವದೆಹಲಿ ಮಾರ್ಚ್ 20, 2026 ರಂದು ಸಿಯುಕೆಯ ಕುಲಸಚಿವರಿಗೆ ಅನುಮತಿ ಪತ್ರವನ್ನು ಕಳುಹಿಸಿದೆ. ಈ ಯೋಜನೆಯ ಕುರಿತು ಮಾತನಾಡಿದ ಡಾ. ಗಣಪತಿ ಬಿ ಸಿನ್ನೂರ "ಸಿಂಧೂ ಕಣಿವೆಯಿಂದ ಇಲ್ಲಿಯವರೆಗಿನ ಭಾರತೀಯ ಸಾಹಿತ್ಯ ಮತ್ತು ಸಂಪ್ರದಾಯಗಳಿಂದ ಕಲಿಯಬೇಕಾದ ಮತ್ತು ಪ್ರಸ್ತುತ ಸಂದರ್ಭದಲ್ಲಿ ಅಳವಡಿಸಿಕೊಳ್ಳಲು ಸೂಕ್ತವಾದ ಬಹಳಷ್ಟು ನಿರ್ವಹಣಾ ಚಿಂತನೆಗಳು, ತತ್ವಗಳು, ಸಿದ್ಧಾಂತಗಳು ಇರುದನ್ನು ನಾವು ಕಾಣಬಹುದು. ಈ ನಿಟ್ಟಿನಲ್ಲಿ ನಾವು ವಚನಕಾರರು ಮಹಾತ್ಮ ಬಸವೇಶ್ವರರು ನಿರ್ಮಿಸಿದ ಅನುಭವ ಮಂಟಪ ಮತ್ತು ಮಹಾಮನೆಯಲ್ಲಿ ಬರೆದ 12 ನೇ ಶತಮಾನದ ವಚನ ಸಾಹಿತ್ಯದ ಕುರಿತು ಸಂಶೋಧನೆ ನಡೆಸುತ್ತಿದ್ದೇವೆ. ನಾಯಕತ್ವ ಸಿದ್ಧಾಂತಗಳು, ಪ್ರೇರಕ ಸಿದ್ಧಾಂತಗಳು, ಮಾನವ ಸಂಪನ್ಮೂಲ ಅಭಿವೃದ್ಧಿ ಸಿದ್ಧಾಂತಗಳು, ಮಾನವ ನಿರ್ವಹಣಾ ಅಭ್ಯಾಸಗಳು, ಸಂವಹನ ಪಾಠಗಳು, ಸಾಂಸ್ಥಿಕ ರಚನೆ ಮತ್ತು ನಡವಳಿಕೆಯ ಸಂಹಿತೆ, ಸಮಾನತೆ, ವೈವಿಧ್ಯತೆ ಮತ್ತು ಒಳಗೊಳ್ಳುವಿಕೆ, ಪರಸ್ಪರ ಸಂಬಂಧಗಳು, ಸಾಂಸ್ಥಿಕ ಪೌರತ್ವ ನಡವಳಿಕೆ ಇತ್ಯಾದಿ ನಿರ್ವಾಹಣಾ ತತ್ವಗಳು ಇರುವುದನ್ನು ನಾವು ಗಮನಿಸಿದ್ದೇವೆ. ಸ್ಥಳೀಯವಾಗಿ ನಿರ್ವಹಣಾ ತತ್ವಗಳ ಸಮೃದ್ಧ ಮೂಲವನ್ನು ನಾವು ಹೊಂದಿದ್ದರೂ ಸಹ, ನಮ್ಮ ಸಮಾಜದಲ್ಲಿ ಸೂಕ್ತವಲ್ಲದ ಪಾಶ್ಚಿಮಾತ್ಯ ನಿರ್ವಹಣಾ ಅಭ್ಯಾಸಗಳನ್ನು ನಾವು ನಕಲು ಮಾಡುತ್ತಿರುವುದು ತುಂಬಾ ದುರದೃಷ್ಟಕರ. ಇದು ವಚನಗಳ ಕುರಿತು ಹೆಚ್ಚು ಆಳವಾದ ಸಂಶೋಧನೆ ಮಾಡಲು ನಮ್ಮನ್ನು ಪ್ರೇರೇಪಿಸಿತು ಮತ್ತು ನಾವು ಪ್ರಸ್ತಾವನೆಯನ್ನು ಐಸಿಎಸ್ಎಸ್ಆರ್ ಗೆ ಸಲ್ಲಿಸಿದ್ದೇವು. ಅದು ಈಗ ಅನುಮೋದನೆ ಗೊಂಡಿರುವುದು ತುಂಬಾ ಸಂತೋಷ ತಂದಿದೆ" ಎಂದು ಹೇಳಿದರು.

ಸಂಶೋಧನೆಯ ಉದ್ದೇಶಗಳ ಕುರಿತು ಮಾತನಾಡಿದ ಅವರು, "ಈ ಅಧ್ಯಯನವು 12 ನೇ ಶತಮಾನದ ವಚನಕಾರರು ಪ್ರಸ್ತಾಪಿಸಿದ ನಿರ್ವಹಣಾ ಪರಿಕಲ್ಪನೆಗಳನ್ನು ಗುರುತಿಸುತ್ತದೆ. ನಂತರ ಈ ನಿರ್ವಹಣಾ ಪರಿಕಲ್ಪನೆಗಳನ್ನು ಪಾಶ್ಚಿಮಾತ್ಯ ಪರಿಕಲ್ಪನೆಗಳೊಂದಿಗೆ ಹೋಲಿಸಿ ವಿಶ್ಲೇಷಿಸಲಾಗುತ್ತದೆ. ವಚನ ತತ್ವಶಾಸ್ತ್ರ ಮತ್ತು ನಿರ್ವಹಣೆಯನ್ನು ಅನುಸರಿಸುತ್ತಿರುವ ಸಂಸ್ಥೆಗಳನ್ನು ಮತ್ತು ವ್ಯಕ್ತಿಗಳನ್ನು ಅಧ್ಯಯನಮಾಡಲಾಗುತ್ತದೆ ಮತ್ತು ಪ್ರಸ್ತುತ ಸಂದರ್ಭದಲ್ಲಿ ವಚನ ಆಧಾರಿತ ನಿರ್ವಹಣಾ ಪರಿಕಲ್ಪನೆಗಳ ಪ್ರಸ್ತುತತೆಯನ್ನು ಪರಿಶೀಲಿಸಲಾಗುತ್ತದೆ" ಎಂದು ಹೇಳಿದರು.

ಸಂಶೋಧನಾ ವಿಧಾನ ಕುರಿತು ಮಾತನಾಡಿದ ಅವರು, "ಕರ್ನಾಟಕದಲ್ಲಿ ವಚನ ಸಾಹಿತ್ಯ ಮತ್ತು ಪಾಶ್ಚಿಮಾತ್ಯ ನಿರ್ವಹಣೆಯ ತತ್ವಗಳ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳನ್ನು ಗುರುತಿಸಲಾಗುತ್ತದೆ. ನಂತರ ಉದ್ಯೋಗಿಗಳಿಗೆ ವಚನ ತತ್ವಗಳ ಆಧಾರದ ಮೇಲೆ ತರಬೇತಿ ನೀಡಲಾಗುತ್ತದೆ. ಇದರಿಂದ ಉದ್ಯೋಗಿಗಳ ನಡವಳಿಕೆಯ ಮೇಲೆ ವಚನ ತತ್ವಗಳ ಪ್ರಭಾವವನ್ನು ತಿಳಿಯಲಾಗುತ್ತದೆ. ವಚನ ಸಾಹಿತ್ಯ ಆಧಾರಿತ ನಿರ್ವಹಣೆ ಮತ್ತು ಪಾಶ್ಚಿಮಾತ್ಯ ನಿರ್ವಹಣೆಯನ್ನು ಅನುಸರಿಸುವ ಜನರ ನಡವಳಿಕೆಯ ನಡುವಿನ ವ್ಯತ್ಯಾಸವನ್ನು ತಿಳಿಯಲು ಪ್ರಯೋಗವನ್ನು ನಡೆಸಲಾಗುತ್ತದೆ. ಈ ನಿಟ್ಟಿನಲ್ಲಿ ನಾವು ಉದಾಹರಣೆ ಅಧ್ಯಯನಗಳನ್ನು ನಡೆಸಿದ್ದೇವೆ ಮತ್ತು ನಮಗೆ ಸಕಾರಾತ್ಮಕ ಫಲಿತಾಂಶಗಳು ಸಿಕ್ಕಿವೆ. ಈ ಸಂಶೋಧನೆಯು ಇದನ್ನು ಇನ್ನೂ ಹೆಚ್ಚು ಆಳವಾದ ಮತ್ತು ವೈಜ್ಞಾನಿಕ ರೀತಿಯಲ್ಲಿ ಮಾಡುತ್ತದೆ. ಈ ಅಧ್ಯಯನವು ಎರಡು ವರ್ಷಗಳಲ್ಲಿ ಪೂರ್ಣಗೊಳ್ಳಲಿದೆ" ಎಂದು ಹೇಳಿದರು.

ಅಧ್ಯಯನದಿಂದಾಗುವ ಪ್ರಯೋಜನೆಗಳ ಕುರಿತು ಮಾತನಾಡಿದ ಅವರು "ಈ ಅಧ್ಯಯನದಿಂದ ಹೊರಬಂದ ಫಲಿತಾಂಶವನ್ನು ವಚನ ಸಾಹಿತ್ಯ ಆಧಾರಿತ ನಿರ್ವಹಣೆಯ ಕುರಿತು ಸಂಶೋಧನಾ ಪ್ರಬಂಧಗಳ ಮತ್ತು ಪುಸ್ತಕಗಳ ಮೂಲಕ ಪ್ರಕಟಿಸಲಾಗುತ್ತದೆ. ಇದು ಭಾರತೀಯ ನಿರ್ವಹಣಾ ಪಠ್ಯಕ್ರಮವನ್ನು ಅಭಿವೃದ್ಧಿಪಡಿಸಲು ಮತ್ತು ಭವಿಷ್ಯದ ನಾಯಕರಿಗೆ ತರಬೇತಿ ನೀಡಲು ಸಹಾಯಕವಾಗುತ್ತದೆ. ಇದು ಸಂಸ್ಥೆಗಳು ತಮ್ಮ ಉದ್ಯೋಗಿಗಳಿಗೆ ತರಬೇತಿ ನೀಡಲು ಅಳವಡಿಸಿಕೊಳ್ಳಬಹುದಾದ ವಚನ ಆಧಾರಿತ ತರಬೇತಿ ಮತ್ತು ಅಭಿವೃದ್ಧಿ ಮಾದರಿಯನ್ನು ಸಹ ಅಭಿವೃದ್ಧಿಪಡಿಸುತ್ತದೆ. ವಚನ ಆಧಾರಿತ ನಿರ್ವಹಣೆಯು ಸಂಸ್ಥೆಯಲ್ಲಿ ಉತ್ತಮ ಪರಸ್ಪರ ಸಂಬಂಧಗಳಿಗೆ ಕಾರಣವಾಗುತ್ತದೆ, ಉದ್ಯೋಗಿಯ ನೈತಿಕತೆಯನ್ನು ಹೆಚ್ಚಿಸುತ್ತದೆ, ಕೆಲಸದ ಬದ್ಧತೆ ಮತ್ತು ಸಮರ್ಪಣೆಯನ್ನು ಹೆಚ್ಚಿಸುತ್ತದೆ, ಮಹಿಳಾ ಸ್ನೇಹಿ ಕೆಲಸದ ಸ್ಥಳವನ್ನು ಸೃಷ್ಟಿಸುತ್ತದೆ, ಸಾಂಸ್ಥಿಕ ಸಂಘರ್ಷವನ್ನು ಕಡಿಮೆ ಮಾಡುತ್ತದೆ, ಉದ್ಯೋಗಿ ಯೋಗಕ್ಷೇಮವನ್ನು ಹೆಚ್ಚಿಸುತ್ತದೆ, ಕೆಲಸದ ತೃಪ್ತಿ ಮತ್ತು ಪ್ರೇರಣೆಯನ್ನು ಹೆಚ್ಚಿಸುತ್ತದೆ, ಉದ್ಯೋಗಿಗಳಲ್ಲಿ ಉತ್ತಮ ಸಹಕಾರ, ಮಾನವೀಯ ನಾಯಕರನ್ನು ಸೃಷ್ಟಿಸುತ್ತದೆ, ಅತಿ ಮುಖ್ಯವಾಗಿ ಇದು ಸಾಮಾನ್ಯ ಜನರನ್ನು ಅಸಾಧಾರಣ ಮನುಷ್ಯರನ್ನಾಗಿ ಮಾಡುತ್ತದೆ" ಎಂದು ಹೇಳಿದರು."ನಾವು ವಚನ ಭಾಷಾಂತರ ಯೋಜನೆಗೆ ಕೆಲಸ ಮಾಡಲು ಅವಕಾಶ ನೀಡಿದ್ದರಿಂದ ವಚನ ಸಾಹಿತ್ಯವನ್ನು ಅನ್ವೇಷಿಸಲು ಮತ್ತು ನಿರ್ವಹಣಾ ತತ್ವಗಳನ್ನು ಕಂಡುಕೊಳ್ಳಲು ಸಾಧ್ಯವಾಯಿತು. ಆದ್ದರಿಂದ ಈ ಅವಕಾಶವನ್ನು ನೀಡಿದ ಮಾನ್ಯ ಕುಲಪತಿ ಪ್ರೊ.ಬಟ್ಟು ಸತ್ಯನಾರಾಯಣ, ಕುಲಸಚಿವ ಪ್ರೊ.ಆರ್.ಆರ್.ಬಿರಾದಾರ ಮತ್ತು ಬಸವ ಸಮಿತಿಯ ಡಾ.ಅರವಿಂದ ಜತ್ತಿ ಅವರಿಗೆ ಕೃತಜ್ಞತೆ ಸಲ್ಲಿಸುತ್ತೇವೆ. ಅದೆ ರೀತಿ ಈ ಸಂಶೋಧನೆಗೆ ಪ್ರೇರಣೆ ಮತ್ತು ಮಾರ್ಗದರ್ಶನ ನೀಡುತ್ತಿರುವ ವೀರಣ್ಣ ದಂಡೆ, ವಿಲಾಸಾವತಿ ಖೂಬಾ, ಎಂ ವಿ ಅಳಗವಾಡಿ, ವಿಕ್ರಂ ವಿಸಾಜಿ, ಬಸವರಾಜ ಡೋಣೂರ ಮತ್ತು ಪ್ರಭುಲಿಂಗ ಮಹಾಗಾಂವಕರ್, ಉದ್ದಂಡಯ್ಯ ಹಿರೇಮಠಾವರಿಗೂ ಕೃತಜ್ಞತೆ ಸಲ್ಲಿಸುತ್ತೇವೆ" ಎಂದರು.

## ಧರ್ಮಸ್ಥಳದಲ್ಲಿ ಕಾಲಾವಧಿ ಜಾತ್ರೆ: ಚಂದ್ರಮಂಡಲ




**ಉಜಿರೆ:** ಧರ್ಮಸ್ಥಳದಲ್ಲಿ ಏ. 14 ರಿಂದ ನಡೆಯುತ್ತಿರುವ ಕಾಲಾವಧಿ ಜಾತ್ರೆ ಪ್ರಯುಕ್ತ ಸೋಮವಾರ ರಾತ್ರಿ ಚಂದ್ರಮಂಡಲ ಉತ್ಸವ ನಡೆಯಿತು.
ನಾಡಿನೆಲ್ಲೆಡೆಯಿಂದ ಸಾವಿರಾರು ಭಕ್ತರು ಉತ್ಸವವನ್ನು ಶ್ರದ್ಧಾ-ಭಕ್ತಿಯಿಂದ ವೀಕ್ಷಿಸಿ ಕಣ್ತುಂಬಿಕೊಂಡರು.

## ಸಾರ್ವಜನಿಕ ಸ್ಥಳಗಳಲ್ಲಿ ಮಲ, ಮೂತ್ರ ವಿಸರ್ಜನೆ ನಿಷೇಧ: ಜುಬಿನ್ ಮೊಹೊಪಾತ್ರ

**ರಾಯಚೂರು:** ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ಕಾರಣಕ್ಕೂ ಮಲ, ಮೂತ್ರ ವಿಸರ್ಜನೆ ಮಾಡುವುದನ್ನು ನಿಷೇಧಿಸಲಾಗಿದೆ ಎಂದು ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ತಿಳಿಸಿದ್ದಾರೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಇವರ ಪತ್ರದನ್ವಯ ಸ್ವಚ್ಛ ಭಾರತ್ ಮಿಷನ್ ಯೋಜನೆಗೆ ಸಂಬಂಧಿಸಿದಂತೆ ನೀಡಿರುವ ಮಾರ್ಗ ಸೂಚಿಗಳನ್ವಯ ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯ 35 ವಾರ್ಡಗಳನ್ನು ಓ.ಡಿ.ಎಫ್ (ಬಯಲು ಶೌಚ ಮುಕ್ತ) ನಗರವೆಂದು ಘೋಷಿಸಿ ಪ್ರಮಾಣ ಪತ್ರ ಪಡೆಯಲಾಗಿದೆ. ಅದರಂತೆ ಓ.ಡಿ.ಎಫ್+ ಮರು ಪ್ರಮಾಣೀಕರಣ ಬಯಲು ಶೌಚ ಮುಕ್ತ ನಗರ ಎಂದು 35 ವಾರ್ಡಗಳನ್ನು ಘೋಷಿಸಲಾಗಿದೆ. ಪಾಲಿಕೆಯ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ಕಾರಣಕ್ಕೂ ಮಲ, ಮೂತ್ರ ವಿಸರ್ಜನೆ ಮಾಡಬಾರದು.

ಮಾಡಿದಲ್ಲಿ ಮೂತ್ರ ವಿಸರ್ಜನೆಗೆ 500ರೂ. ಮತ್ತು ಮಲ ವಿಸರ್ಜನೆಗೆ 1000 ರೂ. ದಂಡ ವಿಧಿಸಲಾಗುವುದು. ಸಾರ್ವಜನಿಕರು, ಸಾರ್ವಜನಿಕ ಶೌಚಾಲಯಗಳು, ಹೋಟೆಲ್ ಮತ್ತು ಪೆಟ್ರೋಲ್ ಬಂಕ್‌ಗಳ ಶೌಚಾಲಯಗಳನ್ನು ಉಚಿತವಾಗಿ ಬಳಸಬಹುದಾಗಿದೆ. ಈ ಬಗ್ಗೆ ಸಾರ್ವಜನಿಕರಿಂದ ಸಲಹೆ, ಸೂಚನೆ ಹಾಗೂ ಆಕ್ಷೇಪಣೆಗಳನ್ನು ಪ್ರಕಟಣೆ ಪ್ರಚುರ ಪಡಿಸಿದ 07 ದಿವಸಗಳೊಗಾಗಿ ಸೂಕ್ತ ದಾಖಲೆಗಳೊಂದಿಗೆ ಲಿಖಿತವಾಗಿ ಸಲ್ಲಿಸಬಹುದಾಗಿದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏಪ್ರಿಲ್ 23ರಂದು ಚಂದ್ರಬಂಡ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ರಾಯಚೂರು:**ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಗೆ ಬರುವ 33/11 ಕೆವಿ ಚಂದ್ರಬಂಡ ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ ಪ್ರಯುಕ್ತ ಏಪ್ರಿಲ್ 23ರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಪ್ಪಂದಕ್ಕೆ ಬನ್ನಿ ಇಲ್ಲವೇ ದಾಳಿ ಎದುರಿಸಿ-ಟ್ರಂಪ್ ಎಚ್ಚರಿಕೆ





**ವಾಷಿಂಗ್ಟನ್/ತೆಹ್ರಾನ್, ಏಪ್ರಿಲ್ 21:**ಅಮೆರಿಕಾ ಮತ್ತು ಇರಾನ್ ನಡುವೆ ನಡೆಯಬೇಕಿದ್ದ ದ್ವಿತೀಯ ಹಂತದ ಶಾಂತಿ ಮಾತುಕತೆಗಳು ಅನಿಶ್ಚಿತತೆಯಲ್ಲಿರುವ ನಡುವೆಯೇ, ಉದ್ವಿಗ್ನತೆ ಮತ್ತಷ್ಟು ಹೆಚ್ಚಾಗಿದೆ. ಅಮೆರಿಕಾ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರು, ಕದನ ವಿರಾಮ ವಿಫಲವಾದರೆ "ಬಹಳಷ್ಟು ಬಾಂಬ್‌ಗಳು ಸಿಡಿಯುತ್ತವೆ" ಎಂದು ಗಂಭೀರ ಎಚ್ಚರಿಕೆ ನೀಡಿದ್ದಾರೆ.ಇದಕ್ಕೆ ಪ್ರತಿಯಾಗಿ ಇರಾನ್, "ಬೆದರಿಕೆಗಳ ನೆರಳಿನಲ್ಲಿ ಮಾತುಕತೆಗಳನ್ನು ನಾವು ಒಪ್ಪುವುದಿಲ್ಲ" ಎಂದು ಕಟುವಾಗಿ ಪ್ರತಿಕ್ರಿಯಿಸಿದೆ. ಇರಾನ್ ಸಂಸತ್ ಅಧ್ಯಕ್ಷ ಮಹಮದ್ ಬಗೇರ್ ಗಾಲೀಬಾಫ್ ಅವರು, ಯುದ್ಧ ಮತ್ತೆ ಪ್ರಾರಂಭವಾದರೆ ತಾವು "ಹೊಸ ಕಾರ್ಡ್‌ಗಳನ್ನು" ಪ್ರದರ್ಶಿಸಲು ಸಿದ್ಧವಿದ್ದೇವೆ ಎಂದು ಹೇಳಿದ್ದಾರೆ.

ಅಮೆರಿಕಾ ಇರಾನ್ ಹಡಗನ್ನು ವಶಪಡಿಸಿಕೊಂಡ ಘಟನೆ ಉದ್ವಿಗ್ನತೆಯನ್ನು ಮತ್ತಷ್ಟು ತೀವ್ರಗೊಳಿಸಿದೆ. ಈ ಪ್ರದೇಶ ಜಾಗತಿಕ ತೈಲ ಸಾಗಣೆಗೆ ಅತ್ಯಂತ ಪ್ರಮುಖ ಮಾರ್ಗವಾಗಿದ್ದು, ಎರಡೂ ದೇಶಗಳ ನಡುವಿನ ಸಂಘರ್ಷದ ಕೇಂದ್ರವಾಗಿದೆ.

ಮಾತುಕತೆಗಳ ಭವಿಷ್ಯ ಅನುಮಾನ

ಪಾಕಿಸ್ತಾನದಲ್ಲಿ ನಡೆಯಬೇಕಿದ್ದ ಶಾಂತಿ ಮಾತುಕತೆಗಳಿಗೆ ಅಮೆರಿಕಾ ಪ್ರತಿನಿಧಿ ತಂಡ ಹಾಜರಾಗುವುದಾಗಿ ತಿಳಿಸಿದರೂ, ಇರಾನ್ ಭಾಗವಹಿಸುವುದರ ಬಗ್ಗೆ ಅನುಮಾನ ವ್ಯಕ್ತವಾಗಿದೆ.ಗಡುವು ಬುಧವಾರ ಮುಕ್ತಾಯವಾಗಲಿದ್ದು, ಅದರ ವಿಸ್ತರಣೆ ಸಾಧ್ಯತೆ ಕಡಿಮೆ ಎಂದು ವರದಿಗಳು ಸೂಚಿಸುತ್ತಿವೆ.

ಅಮೆರಿಕಾ ತಂಡವನ್ನು ಉಪಾಧ್ಯಕ್ಷ ನೇತೃತ್ವವಹಿಸಲಿದ್ದು, ವಿಶೇಷ ದೂತ ಸ್ಟೀವ್ ವಿಟ್‌ಕಾಫ್ ಮತ್ತು ಟ್ರಂಪ್ ಅವರ ಅಳಿಯ ಜಾರೆಟ್ ಕುಶಾನರ್ ಕೂಡ ಭಾಗಿಯಾಗಲಿದ್ದಾರೆ.ಇರಾನ್ ಅಧಿಕಾರಿಗಳ ಪ್ರಕಾರ, ಟ್ರಂಪ್ ಅವರ ಕಠಿಣ ಹೇಳಿಕೆಗಳು ಮತ್ತು ಅಮೆರಿಕಾ ವಿಧಿಸಿರುವ ನಿರ್ಬಂಧಗಳು ಮಾತುಕತೆಗಳಿಗೆ ಅಡ್ಡಿಯಾಗುತ್ತಿವೆ. ಒಪ್ಪಂದದ ಮೂಲ ಅಂಶಗಳಲ್ಲಿ ಕೆಲವು ಒಪ್ಪಿಗೆ ಇದ್ದರೂ, ಸಾರ್ವಜನಿಕವಾಗಿ ನೀಡಲಾಗುತ್ತಿರುವ ತೀವ್ರ ಹೇಳಿಕೆಗಳು ರಾಜತಾಂತ್ರಿಕ ಪ್ರಗತಿಯನ್ನು ಹಾಳುಮಾಡುವ ಅಪಾಯವಿದೆ ಎಂದು ಹೇಳಲಾಗಿದೆ.

ಪಾಕಿಸ್ತಾನದ ಮಧ್ಯವರ್ತಿಗಳು, "ವಿನ್-ವಿನ್" ಪರಿಹಾರವಾಗಿ ಮಾತುಕತೆಗಳನ್ನು ರೂಪಿಸುವಂತೆ ಅಮೆರಿಕಾಗೆ ಸಲಹೆ ನೀಡಿದ್ದು, ಉಗ್ರ ಭಾಷಣಗಳಿಂದ ದೂರವಿರಲು ಸೂಚಿಸಿದ್ದಾರೆ.

ಒಟ್ಟಿನಲ್ಲಿ, ಕದನವಿರಾಮ ಮುಕ್ತಾಯದ ಗಡುವು ಸಮೀಪಿಸುತ್ತಿರುವ ಹಿನ್ನೆಲೆ, ಅಮೆರಿಕಾ-ಇರಾನ್ ನಡುವಿನ ಪರಿಸ್ಥಿತಿ ಅತ್ಯಂತ ಸೂಕ್ಷ್ಮ ಹಂತಕ್ಕೆ ತಲುಪಿದ್ದು, ಶಾಂತಿ ಅಥವಾ ಸಂಘರ್ಷ ಎಂಬ ಎರಡರ ನಡುವೆ ನಿರ್ಣಾಯಕ ಕ್ಷಣ ಎದುರಾಗಿದೆ.

ದಿಗ್ಬಂಧನ ತೆಗೆದುಹಾಕುವುದಿಲ್ಲ

ಈ ನಡೆವೇ ಇರಾನ್ ಜೊತೆ ಒಪ್ಪಂದ ಮಾಡಿಕೊಳ್ಳುವವರೆಗೆ, ಇರಾನ್ ಬಂದರುಗಳ ಮೇಲಿನ ದಿಗ್ಬಂಧನ ತೆಗೆದುಹಾಕುವುದಿಲ್ಲ ಎಂದು ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಗುಡುಗಿದ್ದಾರೆ.

ಯುದ್ಧವನ್ನು ಕೊನೆಗೊಳಿಸಲು ಹೊಸ ಮಾತುಕತೆಗಳು ನಡೆಯುತ್ತವೆಯೇ ಎಂಬ ಬಗ್ಗೆ ಅನಿಶ್ಚಿತತೆ ಮುಂದುವರಿದಿರುವ ನಡುವೆ ಡೊನಾಲ್ಡ್ ಟ್ರಂಪ್ ಹೇಳಿಕೆ ಮಹತ್ವ ಪಡೆದುಕೊಂಡಿದೆ

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಒಂದು ವಾರದ ಹಿಂದೆ ಪ್ರಾರಂಭವಾದ ದಿಗ್ಬಂಧನ "ಇರಾನ್ ಅನ್ನು ಸಂಪೂರ್ಣವಾಗಿ ನಾಶಪಡಿಸುತ್ತಿದೆ" ಅಮೇರಿಕಾ ಸಂಘರ್ಷವನ್ನು "ಬಹಳಷ್ಟು" ಗೆಲ್ಲುತ್ತಿದೆ ಎಂದು ಹೇಳಿದ್ದಾರೆ

ತಾತ್ಕಾಲಿಕ ಅಮೇರಿಕಾ-ಇರಾನ್ ಕದನ ವಿರಾಮ ನಾಳೆ ಕೊನೆಗೊಳ್ಳುವ ಹಿನ್ನೆಲೆಯಲ್ಲಿ ಇರಾನ್‌ಗೆ ಈ ಖಡಕ್ ಸಂದೇಶ ರವಾನಿಸಿದ್ದಾರೆ, ಪಾಕಿಸ್ತಾನದಲ್ಲಿ ಎರಡನೇ ಸುತ್ತಿನ ಶಾಂತಿ ಮಾತುಕತೆಗಳು ನಡೆಯುತ್ತವೆಯೇ ಎಂಬುದರ ಕುರಿತು ಯಾವುದೇ ಸ್ಪಷ್ಟತೆ ನೀಡಲೂ ನಿರಾಕರಿಸಿದ್ದಾರೆಸಭೆಯ ನಿರೀಕ್ಷೆಯಲ್ಲಿ ಪಾಕಿಸ್ತಾನದ ರಾಜಧಾನಿಯಲ್ಲಿ ಬಿಗಿ ಭದ್ರತೆ ಒದಗಿಸಲಾಗಿದೆ. ಅಮೇರಿಕಾ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ▯ ನೇತೃತ್ವದ ನಿಯೋಗ ಮುನ್ನಡೆಸಲಿದ್ದಾರೆ. ಅವರು ಇನ್ನೂ ಅಮೇರಿಕಾದಿಂದ ಇಸ್ಲಮಾಬಾದ್ ಕಡೆ ಹೊರಟಿಲ್ಲ. ಮತ್ತೊಂದೆಡೆ ಅಮೇರಿಕಾದ ಮಾತುಕತೆಯಲ್ಲಿ ಭಾಗಿಯಾಗಬೇಕೇ ಅಥವಾ ಬೇಡವೇ ಎನ್ನುವ ಕುರಿತು ಇನ್ನೂ ಇರಾನ್ ನಿರ್ಧರಿಸಿಲ್ಲ ಎಂದಿದ್ದಾರೆ

ದಿಗ್ಬಂಧನ ಪ್ರಾರಂಭವಾದಾಗಿನಿಂದ, ಅಮೇರಿಕಾ ಪಡೆಗಳು 27 ಹಡಗುಗಳನ್ನು ಇರಾನಿನ ಬಂದರಿಗೆ ಹಿಂತಿರುಗಲು ಅಥವಾ ಹಿಂತಿರುಗಲು ನಿರ್ದೇಶಿಸಿವೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ ಳಿಸಿದೆ.

ದಿಗ್ಬಂಧನವನ್ನು ದಾಟಲು ಪ್ರಯತ್ನಿಸಿದ ನಂತರ, ಸಂಘರ್ಷದಲ್ಲಿ ಮೊದಲ ಬಾರಿಗೆ ಅಮೆರಿಕ, ಇರಾನ್ ಧ್ವಜ ಹೊತ್ತ ಸರಕು ಹಡಗನ್ನು ತಡೆದು ವಶಪಡಿಸಿಕೊಂಡಿತು. ಇದರಿಂದ ಉಭಯ ದೇಶಗಳ ನಡುವೆ ಸಂಘರ್ಷ ಮಿತಿಮೀರಿದೆ

ಸೆಂಟ್‌ಕಾಮ್ ಹಂಚಿಕೊಂಡ ವೀಡಿಯೊಗಳು ಹಡಗಿನ ಮೇಲೆ ಪಡೆಗಳನ್ನು ಹಿಮ್ಮೆಟ್ಟಿಸುವ ಮೊದಲು ಹಡಗಿಗೆ ಎಚ್ಚರಿಕೆ ನೀಡಲಾಗಿರುವುದನ್ನು ತೋರಿಸುತ್ತವೆ ಎಂದು ಹೇಳಲಾಗಿದೆ.ಇರಾನ್ ಇದನ್ನು "ಕಡಲ್ಗಳ್ಳತನದ ಕೃತ್ಯ" ಮತ್ತು ಎರಡು ದೇಶಗಳ ನಡುವಿನ ದುರ್ಬಲವಾದ ಕದನ ವಿರಾಮದ ಉಲ್ಲಂಘನೆ ಎಂದು ಪರಿಗಣಿಸಿದೆ.

ಇರಾನ್ ಸುಮಾರು ಎರಡು ತಿಂಗಳಿನಿಂದ ಪ್ರಮುಖ ಹಡಗು ಮಾರ್ಗವಾದ ಹಾರ್ಮುಜ್ ಜಲಸಂಧಿಯಲ್ಲಿ ತನ್ನದೇ ಆದ ದಿಗ್ಬಂಧನ ಕಾಯ್ದುಕೊಂಡಿದೆ. ಇದರಿಂದಾಗಿ ಜಾಗತಿಕ ಇಂಧನ ಬೆಲೆಗಳು ಗಗನಕ್ಕೇರಿವೆ.

ಈ ತಿಂಗಳ ಆರಂಭದಲ್ಲಿ ನಡೆದ ಮೊದಲ ಸುತ್ತಿನ ಮಾತುಕತೆಯ ನಂತರ, ಅಮೆರಿಕದ ಉಪಾಧ್ಯಕ್ಷ ಜೆ ಡಿ ವ್ಯಾನ್ಸ್, "ಇರಾನ್‌ನ ನಮ್ಮ ಷರತ್ತುಗಳನ್ನು ಒಪ್ಪಿಕೊಳ್ಳಲು ಸಿದ್ಧರಿರುವ ಪರಿಸ್ಥಿತಿಗೆ ಅಮೆರಿಕ ಬರಲು ಸಾಧ್ಯವಿಲ್ಲ" ಎಂದು ಹೇಳಿದ್ದಾರೆ

## ಬಸ್ಸು ಡಿಕ್ಕಿ: ಬಸ್ ನಿಲ್ದಾಣದ ಕಾರ್ಮಿಕ ಮಹಿಳೆ ಸಾವು



**ಜೇವರಗಿ,ಏ 21:** ಪಟ್ಟಣದ ಬಸ್ ನಿಲ್ದಾಣದಲ್ಲಿ ಹಲವು ವರ್ಷಗಳಿಂದ ಕಸ ಗುಡಿಸುತ್ತಿದ್ದ ಮಹಿಳೆಗೆ ಸಾರಿಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲಿಯೇ ಸಾವನ್ನಪ್ಪಿದಾಳೆ.

ಮಾನಮ್ಮ ಚಂದ್ರಕಾಂತ್ ಜೇವರ್ಗಿ( 50) ಅಪಘಾತದಲ್ಲಿ ಸಾವಿಗೀಡಾದ ಮಹಿಳೆ. ಬಸ್ ನಿಲ್ದಾಣದಲ್ಲಿ ಕಸ ಹೊಡೆದು ಕಸ ಚೆಲ್ಲಿ ಬರುವಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕಾಳಗಿ ಡಿಪೊಕ್ಕೆ ಸೇರಿದ ಬಸ್ಸು ಡಿಕ್ಕಿ ಹೊಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಬಸ್ಸು ಬೆಂಗಳೂರಿನಿಂದ ಕಲಬುರ್ಗಿ ಕಡೆ ಹೊರಟಿತ್ತು. ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪಿ ಎಸ್ ಐ ಗಜಾನಂದ್ ಬಿರಾದರ್ ತಿಳಿಸಿದ್ದಾರೆ. ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.ಮೃತ ಮಹಿಳೆ ಕುಟುಂಬಕ್ಕೆ ಪರಿಹಾರ ನೀಡಬೇಕೆಂದು ಬಸ್ ಡಿಪೊ ಎದುರುಗಡೆ ಪ್ರತಿಭಟನೆ ಮಾಡಲಾಯಿತು .

# ಆಲಮಟ್ಟಿ ಉದ್ಯಾನವನಕ್ಕೆ ನೂತನ ಬಸ್: ಸಂಚಾರಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ



**ವಿಜಯಪುರ ಏ. 21 :** ವಿಜಯಪುರದಿಂದ ಆಲಮಟ್ಟಿ ಉದ್ಯಾನವನಕ್ಕೆ ಹೊಸದಾಗಿ ಆರಂಭಗೊಂಡ ನೂತನ ಸಾರಿಗೆ ಬಸ್ ಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಜಯಪುರ ವಿಭಾಗದಿಂದ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ ಪಾಟೀಲ ಇವರ ಸೂಚನೆಯಂತೆ ವಿಜಯಪುರದಿಂದ ಜಿಲ್ಲೆಯ ಪ್ರೇಕ್ಷಣೀಯ ಸ್ಥಳ ಆಲಮಟ್ಟಿ ಉದ್ಯಾನವನಕ್ಕೆ ನೂತನ ಸಾರಿಗೆಯನ್ನು ಆರಂಭಗೊಳಿಸಲಾಗಿದೆ.

ಈ ಸಾರಿಗೆಯು ಪ್ರತಿದಿನ ಆರು ಸರತಿಯಲ್ಲಿ ವಿಜಯಪುರದಿಂದ ಆಲಮಟ್ಟಿ ಉದ್ಯಾನವನಕ್ಕೆ ಹೋಗಿ ಬರಲಿದೆ. ಮೊದಲನೇ ಪಾಳಿ ಬೆಳಿಗ್ಗೆ 10 ಗಂಟೆಗೆ ವೀರ ರಾಣಿ ಕಿತ್ತೂರ ಚೆನ್ನಮ್ಮ ಕೇಂದ್ರ ಬಸ್ ನಿಲ್ದಾಣದಿಂದ ಆರಂಭಗೊಳ್ಳಲಿದೆ.

ಆಲಮಟ್ಟಿಯ ಉದ್ಯಾನವನದಿಂದ ಕೊನೆಯ ಬಸ್ ರಾತ್ರಿ 8.20ಕ್ಕೆ ಮರಳಿ ವಿಜಯಪುರಕ್ಕೆ ಬಸ್ ಆಗಮಿಸಲಿದೆ.

ಬಳಿಕ ಮಾತನಾಡಿದ ಸಚಿವರು, ಪ್ರೇಕ್ಷಣೀಯ ಸ್ಥಳಗಳಿಗೆ ಹೊಸದಾಗಿ ತನ್ನ ಸಂಚಾರ ಆರಂಭಿಸಲಿರುವ ಈ ಬಸ್ ಸೌಲಭ್ಯವನ್ನು ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ., ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ರಿಷಿ ಆನಂದ, ಕೆಕೆಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ, ವಿಜಯಪುರ ಮೂರನೇ ಘಟಕದ ವ್ಯವಸ್ಥಾಪಕ ಎಸ್. ಎಂ. ವಾಲೀಕಾರ, ಸಹಾಯಕ ಸಂಚಾರ ವ್ಯವಸ್ಥಾಪಕ ಜಾನಪ್ಪ ಹುಗ್ಗೆಣ್ಣನವರ, ಪ್ರವಾಸೋದ್ಯಮ ಇಲಾಖೆಯ ಅನೀಲಕುಮಾರ ಬಣಜಿಗೇರ ಸೇರಿದಂತೆ ಜಿಲ್ಲಾ ಮಟ್ಟದ ವರೆಗೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಸವಜ್ಯೋತಿ ಪಾದಯಾತ್ರೆಗೆ ಭವ್ಯ ಸ್ವಾಗತ



**ವಿಜಯಪುರ, ಏ. 21:** ಜಗಜ್ಯೋತಿ ಬಸವೇಶ್ವರರ ಜಯಂತಿಯ ಶುಭ ಸಂದರ್ಭದಲ್ಲಿ, ಬಸವನ ಬಾಗೇವಾಡಿಯಿಂದ ವಿಜಯಪುರದ ಬಸವೇಶ್ವರ ವೃತ್ತದವರೆಗೆ ಹಮ್ಮಿಕೊಳ್ಳಲಾಗಿದ್ದ ಭವ್ಯ ಬಸವಜ್ಯೋತಿ ಪಾದಯಾತ್ರೆಯನ್ನು ನಗರದ ಬಸವ ಸಮಿತಿ ಹಾಗೂ ಸಿದ್ದೇಶ್ವರ ಬ್ಯಾಂಕ್ ಅಧ್ಯಕ್ಷ ರವೀಂದ್ರ ಬಿಜ್ಜರಗಿ ಮತ್ತು ಗಣ್ಯರು ಸ್ವಾಗತಿಸಿದರು.

ಬೆಂಗಳೂರಿನಲ್ಲಿ ನೆಲೆಸಿರುವ ವಿಜಯಪುರ ಜಿಲ್ಲೆಯ ಹಂದಿಗನೂರ ಗ್ರಾಮದ ಬಿ. ಬಿ. ಪಾಟೀಲ ಅವರ ನೇತೃತ್ವದಲ್ಲಿ ಹಾಗೂ ವಿಜಯಪುರ ಸೈಕ್ಲಿಂಗ್ ಗ್ರೂಪ್ ಸಹಯೋಗದಲ್ಲಿ ಈ ಪಾದಯಾತ್ರೆಯನ್ನು ಆಯೋಜಿಸಲಾಗಿತ್ತು. ನಿನ್ನೆ ರಾತ್ರಿ ಬಸವನ ಬಾಗೇವಾಡಿಯಿಂದ ಆರಂಭಗೊಂಡ ಈ ಪಾದಯಾತ್ರೆಯು ಮಸಬಿನಾಳ, ಉಕ್ಕಲಿ ಹಾಗೂ ಉಕುಮನಾಳ ಮಾರ್ಗವಾಗಿ ಇಂದು ನಸುಕಿನ ಜಾವ ಶಿವಗಿರಿಗೆ ತಲುಪಿತು.

ಈ ಸಂದರ್ಭದಲ್ಲಿ ಶಿವಗಿರಿ ಕ್ಷೇತ್ರದಲ್ಲಿ ಪಾದಯಾತ್ರಿಕರಿಗೆ ಸ್ವಾಗತ ಕೋರಿ, ವಿಶೇಷ ಪೂಜೆ ಸಲ್ಲಿಸಲಾಯಿತು.

ಪಾದಯಾತ್ರೆಯ ಸಾಗಿದ ಮಾರ್ಗದುದ್ದಕ್ಕೂ ಗ್ರಾಮಸ್ಥರು ಭಕ್ತಿಯಿಂದ ಪಾದಯಾತ್ರಿಕರಿಗೆ ಪುಷ್ಪಗುಚ್ಛ ನೀಡಿ, ಬಸವಣ್ಣನವರ ಘೋಷಣೆಗಳನ್ನು ಕೂಗುತ್ತಾ ಅತ್ಯಂತ ಸಂಭ್ರಮದಿಂದ ಬರಮಾಡಿಕೊಂಡರು.

ಈ ಯಾತ್ರೆಯಲ್ಲಿ ಬೆಂಗಳೂರಿನ ಜಗದೀಶ ದಮನಿಯಾ, ಸಂದೀಪ ಡಿಯೋ, ಉಮಾಶಂಕರ ಮೆಳ್ಳಿಗೆರೆ, ಬಿ. ಎಸ್. ಸಜ್ಜನ, ಕೃಪಾಕರ, ಹುಬ್ಬಳ್ಳಿಯ ರೂಪಾ ಕಳ್ಳಿಗುಡ್ಡ ಹಾಗೂ ಡಾ. ಶಿಲ್ಪಾ ಚರಂತಿಮಠ ಪಾಲ್ಗೊಂಡಿದ್ದರು. ವಿಜಯಪುರ ಸೈಕ್ಲಿಂಗ್ ಗ್ರೂಪ್ ಅಧ್ಯಕ್ಷ ಡಾ. ಮಹಾಂತೇಶ ಬಿರಾದಾರ, ಉಪಾಧ್ಯಕ್ಷ ಶಿವನಗೌಡ ಪಾಟೀಲ, ಸದಸ್ಯರಾದ ಡಾ. ರಾಜು ಯಲಗೊಂಡ, ಡಾ. ಮಹಾಂತೇಶ ಹೊಸಮನಿ, ಡಾ. ಉದಯಕುಮಾರ ಜಾಧವ, ಸಚಿನ ಪಾಟೀಲ, ಡಾ. ಪ್ರವೀಣ ಚೌರ, ಡಾ. ಚೌಕಿಮಠ ಶಿವಕುಮಾರ, ಅಮೋಘ ಬಸನಾಳ, ಧ್ರುವ ಮಠ, ಸೋಮು ಮಠ, ಸಂದೀಪ ಮಡಗೊಂಡ, ಸತ್ಯ ವಿಜಯನ್, ಶಿವಾನಂದ ಯರನಾಳ, ಸಂಕೇತ ಬಗಲಿ, ಉಮೇಶ ಮೇಟಗಾರ, ನದೀಶ ಹುಂಡೇಕರ, ಶ್ರೀನಿವಾಸ, ವಿನಯ ಪಾಟೀಲ ಸೇರಿದಂತೆ ನೂರಾರು ಬಸವ ಅಭಿಮಾನಿಗಳು ಉಪಸ್ಥಿತರಿದ್ದರು.

# ಪಿ.ಕೆ. ನಾಗನೂರ ಪಿಕೆಪಿಎಸ್ ಗೆ 1.43 ಕೋಟಿ ರೂ. ನಿವ್ವಳ ಲಾಭ

**ಅಥಣಿ : ಏ.21:**ರೈತರ ಆರ್ಥಿಕ ಪ್ರಗತಿಗೆ ಮತ್ತು ಕೃಷಿ ಚಟುವಟಿಕೆಗಳಿಗೆ ಬೆನ್ನೆಲುಬಾಗಿ ನಿಲ್ಲುವ ಮೂಲಕ ಅಥಣಿ ತಾಲೂಕಿನ ನಾಗನೂರ ಪಿ.ಕೆ. ಗ್ರಾಮದ ವಿವಿಧೋದ್ದೇಶಗಳ ಪ್ರಾಥಮಿಕ ಕೃಷಿ ಸಹಕಾರ ಸಂಘವು ಪ್ರಸಕ್ತ ವರ್ಷದಲ್ಲಿ 21.72 ಕೋಟಿ ರೂ. ಸಾಲ ವಿತರಿಸಿ 1.43 ಕೋಟಿ ರೂ. ನಿವ್ವಳ ಲಾಭ ಗಳಿಸಿದೆ ಎಂದು ಶಾಸಕ ಲಕ್ಷ್ಮಣ ಸವದಿ ತಿಳಿಸಿದರು.



ಅವರು ಅಥಣಿ ತಾಲೂಕಿನ ನಾಗನೂರ ಪಿ.ಕೆ. ಗ್ರಾಮದ ವಿವಿಧೋದ್ದೇಶಗಳ ಪ್ರಾಥಮಿಕ ಕೃಷಿ ಸಹಕಾರ ಸಂಘದ ಕಾರ್ಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿ ಮಾತನಾಡಿದರು. ಸಂಘವು 1222 ಸದಸ್ಯರನ್ನು ಹೊಂದಿದ್ದು, 1.56 ಕೋಟಿ ರೂ. ಶೇರು ಬಂಡವಾಳ ಸಂಗ್ರಹಿಸಲಾಗಿದೆ. 3.03 ಕೋಟಿ ರೂ. ನಿಧಿ ಮತ್ತು 41.69 ಕೋಟಿ ರೂ. ದುಡಿಯುವ ಬಂಡವಾಳ ಹೊಂದಿದ್ದು. 22.52 ಕೋಟಿ ರೂ. ಠೇವು ಸಂಗ್ರಹಿಸಿದ್ದು ಅತೀವ ಸಂತಸ ತಂದಿದೆ ಎಂದರು.

'ರೈತ ಬಾಂಧವರು ಸಾವಯವ ಕೃಷಿಗೆ ಹೆಚ್ಚಿನ ಆದ್ಯತೆ ನೀಡಿ ಭೂಮಿಯ ಫಲವತ್ತತೆಯನ್ನು ಹೆಚ್ಚಿಸುವುದರೊಂದಿಗೆ ಆರ್ಥಿಕವಾಗಿ ಪ್ರಗತಿ ಸಾಧಿಸಬೇಕು. ಸಂಘವು ನೀಡಿದ ಸಾಲಗಳನ್ನು ಸದುಪಯೋಗ ಪಡಿಸಿಕೊಂಡು ಸಕಾಲದಲ್ಲಿ ಮರುಪಾವತಿ ಮಾಡಿ, ಸಂಘದ ಪ್ರಗತಿಯೊಂದಿಗೆ ತಾವು ಆರ್ಥಿಕವಾಗಿ ಸದೃಢರಾಗಿ' ಎಂದು ಕರೆ ನೀಡಿದರು.

ಆನಂತರ ವಿವಿಧೋದ್ದೇಶಗಳ ಪ್ರಾಥಮಿಕ ಕೃಷಿ ಸಹಕಾರ ಸಂಘದ ಅಧ್ಯಕ್ಷ ಪರಪ್ಪ ಸವದಿ ಮಾತನಾಡಿ,

ನಮ್ಮ ರೈತರಿಗೆ ಆರ್ಥಿಕವಾಗಿ ಬಲ ತುಂಬುವ ನಿಟ್ಟಿನಲ್ಲಿ ಪಿಕೆಪಿಎಸ್ ವರದಾನವಾಗಿದೆ. ಶಾಸಕ ಲಕ್ಷ್ಮಣ ಸವದಿ ಮಾರ್ಗದರ್ಶನ ಹಾಗೂ ಸಂಘದ ಎಲ್ಲ ಸದಸ್ಯರ ಹಾಗೂ ಸಿಬ್ಬಂದಿಗಳ ಸಹಕಾರದಿಂದ ಸಂಘ ಪ್ರಗತಿಯತ್ತ ಸಾಗುತ್ತಿದೆ. ಸದಸ್ಯರು ಹಾಗೂ ರೈತರ ಹಿತಾಸಕ್ತಿ ಕಾಪಾಡಲು ಸಂಘ ಬದ್ಧವಾಗಿದೆ. ಸಂಘದ ಏಳಿಗೆಗೆ ಪ್ರತಿಯೊಬ್ಬರ ಕೊಡುಗೆ ಸ್ಮರಣೀಯ ಎಂದರು.

ಈ ವೇಳೆ ಸಂಘದ ಉಪಾಧ್ಯಕ್ಷ ಹನುಮಂತ ಹುದ್ದಾರ. ನಿರ್ದೇಶಕರಾದ ಗಂಗಪ್ಪ ಬಿಳ್ಳೂರ, ರಾವಸಾಬ ಐಗಳಿ, ಬಸಪ್ಪ ತೇಲಿ, ಕಲಗೌಡ ಪಾಟೀಲ, ರಾಮಪ್ಪ ಗುಡ್ಡೇಣವರ, ಮಲ್ಲಪ್ಪ ಚೌಗಲಾ, ಸಂಗಪ್ಪ ಅಂಬಿ, ಶ್ರೀಶೈಲ ಕಾಂಬಳೆ, ಸಾವಿತ್ರಿ ಪಾಟೀಲ, ರೂಪಾ ಕರಾಳೆ, ಮುಖ್ಯಕಾರ್ಯನಿರ್ವಾಹಕ ಬಸವರಾಜ ತೇಲಿ ಸೇರಿದಂತೆ ಇತರರು ಇದ್ದರು.

# ಜೇವರ್ಗಿ ಡಿಗ್ರಿ ಕಾಲೇಜಿನಲ್ಲಿ ಬಸವ ಜಯಂತಿ ಆಚರಣೆ

**ಜೇವರ್ಗಿ :** ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಾ ಮಾನವತಾವಾದಿ, ಸಾಂಸ್ಕೃತಿಕ ನಾಯಕ ಬಸವಣ್ಣನವರ 893ನೇ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಪ್ರಾಂಶುಪಾಲೆ

ಡಾ. ಶಾಂತಾ ಅಸ್ಟಿಗೆ ಮಾತನಾಡಿ, ಬಸವಣ್ಣ ವರ್ಣಭೇದ, ವರ್ಗವೇದ, ಲಿಂಗಭೇದ ಗಳನ್ನು ವಿರೋಧಿಸಿದ ಸಮಾನತೆಯನ್ನು ಸಾರಿದನು. ಮನುಷ್ಯ ಸತ್ಯ ಶುದ್ಧ ಕಾಯಕ ಮಾಡಬೇಕು ಎಂಬ ಬಸವಣ್ಣನವರ ಈ ತತ್ವಗಳನ್ನು ಬದುಕಿನಲ್ಲಿ ಪಾಲಿಸಬೇಕು ಎಂದು ಹೇಳಿದರು.

ಸಾಂಸ್ಕೃತಿಕ ಸಮಿತಿ ಸಂಚಾಲಕ ಡಾ.ಖಾಜಾವಲಿ ಈಚನಾಳ ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿ, ಬಸವಣ್ಣ ಸಮ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಕ್ರಾಂತಿ ಪುರುಷ. ಅವರ ವಚನಗಳ ಅಂಶಗಳು ಸಂವಿಧಾನದಲ್ಲಿ ಅಡಕವಾಗಿವೆ ಎಂದರು. ಕಾರ್ಯಕ್ರಮದಲ್ಲಿ ಐಕ್ಯುಎಸಿ ಸಂಯೋಜಕ ಡಾ. ಸಂದೀಪ್ ತಿವಾರಿ, ಸಹ ಸಂಯೋಜಕ ಡಾ. ರವೀಂದ್ರ, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಶಿವಕುಮಾರ್, ಅತಿಥಿ ಉಪನ್ಯಾಸಕ ಡಾ. ನಾಗನಗೌಡ, ಜಯಪ್ರಕಾಶ್ ಬಿರಾದಾರ್ ಇದ್ದರು. ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಶರಣಪ್ಪ ಗುಂಡಗುರ್ತಿ ವಂದಿಸಿದರು. ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಅಧ್ಯಾಪಕರು, ಅತಿಥಿ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿಗಳು ಹಾಜರಿದ್ದರು.

# ನಾರಿಶಕ್ತಿಗೆ ವಿರೋಧ-ಬಿಜೆಪಿ ಮಹಿಳಾ ಮೋರ್ಚಾ ಬೃಹತ್ ಪ್ರತಿಭಟನೆ

**ಕೋಲಾರ,ಏ.21–** ಕೇಂದ್ರದ ಮೋದಿ ನೇತೃತ್ವದ ಸರ್ಕಾರ ಸಂಸತ್‌ನಲ್ಲಿ ಮಂಡಿಸಿದ್ದ 'ನಾರಿಶಕ್ತಿ ವಂದನ್ಮಸೂದೆಗೆ ಅಡ್ಡಿಪಡಿಸುವ ಮೂಲಕ ದೇಶದ ಮಹಿಳೆಯರ ಸ್ವಾಭಿಮಾನಕ್ಕೆ ಧಕ್ಕೆ ತಂದು ಮಹಾದ್ರೋಹ ಬಗೆದಿರುವ ಭ್ರಷ್ಟ ಕಾಂಗ್ರೆಸ್ ಮತ್ತವರ ಬೆಂಬಲಿಗ ಪಕ್ಷಗಳನ್ನು ಚುನಾವಣೆಯಲ್ಲಿ ಬಹಿಷ್ಕರಿಸಲು ಬಿಜೆಪಿ ಮುಖಂಡರು ಕರೆ ನೀಡಿದರು.

ನಗರದ ಬಸ್‌ನಿಲ್ದಾಣ ವೃತ್ತದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ, ಮಾಜಿ ಸಚಿವ ವರ್ತೂರು ಪ್ರಕಾಶ್,ಮಾಜಿ ಸಂಸದ ಎಸ್.ಮುನಿಸ್ವಾಮಿ ಅವರ ಪತ್ನಿ ಶೈಲಜ ಮುನಿಸ್ವಾಮಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಅರುಣಮ್ಮ ಮತ್ತಿತರರ ನೇತೃತ್ವದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ನೂರಾರು ಮಹಿಳೆಯರು ಭಾಗವಹಿಸಿ ಮಾನವ ಸರಪಳಿ ನಿರ್ಮಿಸಿದ್ದಲ್ಲದೇ ರಾಹುಲ್‌ಗಾಂಧಿ,ಸಿದ್ದರಾಮಯ್ಯ,ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಘೋಷಣೆ ಕೂಗಿದರು.

ಮಾಜಿ ಸಚಿವ ವರ್ತೂರು ಪ್ರಕಾಶ್ ಮಾತನಾಡಿ, ಲೋಕಸಭೆಯಲ್ಲಿ ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿ ವಿಧೇಯಕ ಮಂಡಿಸಲಾಗಿದ್ದು ಈ ವಿಧೇಯಕ ಸೋಲಿಗೆ ಪ್ರಮುಖ ಪಾತ್ರ ವಹಿಸಿರುವ ಕಾಂಗ್ರೆಸ್ ಪಕ್ಷದ ವಿರುದ್ಧ ಮಹಿಳೆಯರು ಹೋರಾಟ ನಡೆಸುವುದು ಮಾತ್ರವಲ್ಲ ಮುಂದಿನ ಚುನಾವಣೆಯಲ್ಲಿ ಬಹಿಷ್ಕರಿಸಬೇಕು ಎಂದು ಕರೆ ನೀಡಿದರು.

ಮಹಿಳೆಯರನ್ನು ಅಧಿಕಾರದಿಂದ ದೂರವಿಡಬೇಕು ಎಂಬುದು ಕಾಂಗ್ರೆಸ್‌ನ ಸಿದ್ಧಾಂತವಾಗಿದೆ, ಇಂತಹ ಸಂದರ್ಭದಲ್ಲಿ ಮಹಿಳೆಯರು ಏಕೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಪ್ರಶ್ನಿಸಿದ ಅವರು ಹೆತ್ತತಾಯಿಗೂ ಗೌರವ ನೀಡದ ಸಂಸ್ಕೃತಿ ಈ ಕಾಂಗ್ರೆಸ್ಸಿಗರದ್ದು ಎಂದು ಖಂಡಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ ಮಾತನಾಡಿ,ದಶಕಗಳ ಕಾಲದಿಂದ ಮಹಿಳಾ ಮೀಸಲಾತಿ ಮಸೂದೆಯನ್ನು ಮೂಲೆ ಗುಂಪು ಮಾಡಿದ್ದ ಕಾಂಗ್ರೇಸ್ ಪಕ್ಷ ಇದೀಗ ಪ್ರಧಾನಿ ನರೇಂದ್ರ ಮೋದಿಯವರು ಇಚ್ಛಾಶಕ್ತಿ ಹಾಗೂ ಮಹಿಳೆಯರ ಮೇಲಿನ ಗೌರವದಿಂದ ಸಂಸತ್‌ನಲ್ಲಿ ನಾರಿಶಕ್ತಿ ವಂದನ್ ಮಸೂದೆ ಮೂಡಿಸಿದಾಗ ಅದನ್ನು ವಿರೋಧಿಸುವ ಮೂಲಕ ತಮ್ಮ ಕೀಳು ಮಟ್ಟದ ರಾಜಕೀಯ ಸಂಸ್ಕೃತಿಗೆ ಸಾಕ್ಷಿಯಾಗಿದ್ದಾರೆ ಎಂದು ಟೀಕಿಸಿದರು.

ಮಹಿಳಾ ಮೀಸಲಾತಿಯ ಬಿಲ್ ವಿರೋಧಿಸಿರುವ ಕಾಂಗೆಸ್ ಪಕ್ಷದ ವಿರುದ್ಧ ರಾಜ್ಯ ಮಟ್ಟದಲ್ಲಿ ಬಿಜೆಪಿ ಬೃಹತ್ ಪ್ರತಿಭಟನೆಯನ್ನು ನಡೆಸಲಿದೆ ಎಂದ ಅವರು, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಕಾಂಗ್ರೇಸ್ ವಿರುದ್ಧ ಪ್ರತಿಭಟನೆ ನಡೆಸಲಾಗುವುದು ಮಹಿಳೆಯರಿಗಾದ ಅನ್ಯಾಯದ ವಿರುದ್ಧ ಎಚ್ಚತ್ತು ಕೊಳ್ಳುವಂತೆ ಮಹಿಳೆಯರವನ್ನು ಸಂಘಟಿಸಿ ಹೋರಾಟ ಮಾಡಲಾಗುವುದು ಎಂದರು.

ಮಾಜಿ ಸಂಸದ ಎಸ್‌ಮುನಿಸ್ವಾಮಿ ಅವರ ಪತ್ನಿ ಶೈಲಜಾ ಮುನಿಸ್ವಾಮಿ ಮಾತನಾಡಿ, ಕಾಂಗ್ರೆಸ್ ಮತ್ತದರ ಮಿತ್ರ ಪಕ್ಷಗಳ ಇಂಡೀ ಕೂಟ ಮಹಿಳಾ ಮೀಸಲಾತಿ ಮಸೂದೆಗೆ ವಿರೋಧ ವ್ಯಕ್ತಪಡಿಸುವ ಮೂಲಕ ಭಾರತೀಯ ಸಂಸ್ಕೃತಿಯಲ್ಲಿ ಪವಿತ್ರ ಸ್ಥಾನ ಹೊಂದಿರುವ ಇಡೀ ಮಹಿಳಾ ಕುಲಕ್ಕೆ ಅಪಮಾನ ಮಾಡಿದ್ದಾರೆ ಎಂದು ಖಂಡಿಸಿದರು.

ಪ್ರಧಾನಿ ಮೋದಿಯವರು 'ನಾರಿಶಕ್ತಿ ವಂದನ್ ಮಹಿಳೆಯರಿಗೆ ವಂದಿಸುವ ಪ್ರತೀಕವಾಗಿ ಮಸೂದೆ ಮಂಡಿಸಿದ್ದು, ಬಿಜೆಪಿಯ ಸಂಸ್ಕೃತಿಯನ್ನು ಅನಾವರಣಗೊಳಿಸಿದರು. ಆದರೆ ಕಾಂಗ್ರೆಸ್ ಮುಖಂಡರು ಇದಕ್ಕೆ ಧಕ್ಕೆ ತಂದು ಮಹಿಳೆಯರ ಸ್ವಾಭಿಮಾನಕ್ಕೆ ಧಕ್ಕೆ ತಂದರು, ಇದೇ ಕಾಂಗ್ರೆಸ್ ಹಿಂದೆ ದೇವೇಗೌಡರು ಪ್ರಧಾನಿಯಾಗಿದ್ದಾಗಲೂ ಈ ಮಸೂದೆಗೆ ವಿರೋಧ ವ್ಯಕ್ತಪಡಿಸಿದ್ದರು ಎಂದರು.




ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಅರುಣಮ್ಮ ಮಾತನಾಡಿ, ಮಹಿಳೆಯರು ಕಾಂಗ್ರೆಸ್ ಮಾಡಿರುವ ಈ ಮಹಾದ್ರೋಹದ ಕುರಿತು ಎಚ್ಚೆತ್ತುಕೊಳ್ಳಬೇಕು, ಬೀದಿಗಿಳಿದು ಹೋರಾಟ ಮಾಡುವ ಸಂಕಲ್ಪ ಮಾಡಬೇಕು, ನಿಮ್ಮೊಂದಿಗೆ ಬಿಜೆಪಿ ಮಹಿಳಾ ಮೋರ್ಚಾ ಸದಾ ನಿಲ್ಲುತ್ತದೆ ಎಂದು ತಿಳಿಸಿ, ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲು ಕರೆ ನೀಡಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಮಹಿಳಾ ಮೋರ್ಚಾದ ಮಮತಮ್ಮ,ಅಶ್ವಿನಿ,ಗೀತಾ,ಶ್ವೇತಾ, ನಗರಸಭೆ ಮಾಜಿ ಸದಸ್ಯ ಪ್ರವೀಣ್‌ಗೌಡ, ಬಿಜೆಪಿ ಮುಖಂಡರಾದ ವಿಜಯಕುಮಾರ್, ಎಂ.ಪಿ.ನಾರಾಯಣಸ್ವಾಮಿ, ಅಪ್ಪಿನಾರಾಯಣಸ್ವಾಮಿ, ಕೆಂಬೋಡಿ ನಾರಾಯಣಸ್ವಾಮಿ,ಒಬಿಸಿ ಮೋರ್ಚಾ ಬಾಲಾಜಿ,ತಿಮ್ಮರಾಯಪ್ಪ, ಮಾಲೂರು ಕೃಷ್ಣಪ್ಪ, ಮುಳಬಾಗಿಲು ಮಂಜುನಾಥಗೌಡ, ಶಿವಣ್ಣ, ಲಕ್ಷ್ಮಣಗೌಡ, ಸುರೇಶ್,ಕಿರಣ್,ಬಂಗಾರಪೇಟೆ ಮಹೇಶ್, ಮಾಲೂರು ಅಪ್ಪಿರಾಜು, ಸಾ.ಮಾ.ಅನಿಲ್‌ಬಾಬು ಮತ್ತಿತರರಿದ್ದರು.

# ಉಡುತೊರೆ ಜಲಾಶಯದ ಹಿನ್ನೀರಿನ ಕೆಸರಿನಲ್ಲಿ ಸಿಲುಕಿದ್ದ ಮೂರು ಆನೆಗಳ ರಕ್ಷಣೆ

**ಹನೂರು.ಏ.21 :–** ತಾಲೂಕಿನ ಮಲೆ ಮಹದೇಶ್ವರ ವನ್ಯಜೀವಿ ವಲಯದ ಉಡುತೊರೆ ಹಳ್ಳ ಜಲಾಶಯದ ಹಿನ್ನೀರಿನ ಕೆಸರಿನಲ್ಲಿ ಹೂತುಕೊಂಡ ಮೂರು ಆನೆಗಳನ್ನು ಅರಣ್ಯ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು ಕಾರ್ಯಾಚರಣೆ ಮೂಲಕ ರಕ್ಷಣೆ ಮಾಡಿದ್ದಾರೆ. ಇದರಲ್ಲಿ ಅಸ್ವಸ್ಥಗೊಂಡ ಒಂದು ಆನೆಗೆ ಸ್ಥಳದಲ್ಲಿ ಚಿಕಿತ್ಸೆ ನೀಡಿ ಹಾರೈಕೆ ಮಾಡಲಾಗುತ್ತಿದೆ.ಮಲೆ ಮಹದೇಶ್ವರ ವನ್ಯಜೀವಿ ಧಾಮ ಹನೂರು ಬಫರ್ ವಲಯಕ್ಕೆ ಸೇರಿದ ಉಡುತೊರೆ ಹಳ್ಳ ಜಲಾಶಯದ ಹಿನ್ನೀರಿನ ಭಾಗದಲ್ಲಿ ನೀರು ಕುಡಿಯಲು ನಾಲ್ಕು ಆನೆಗಳು ಬಂದಿದೆ. ಈವೇಳೆ ಮೂರು ಆನೆಗಳು ಕೆಸರಿನಲ್ಲಿ ಸಿಲುಕಿ ಹೂತುಕೊಂಡಿವೆ. ಇದರಲ್ಲಿ ಒಂದು ಆನೆಯು ಹೇಗೋ ನೀರು ಕುಡಿದುಕೊಂಡು ಅರಣ್ಯದೊಳಗೆ ಹೊರಟುಹೋಗಿದೆ.

ಶನಿವಾರ ಸಂಜೆ ಅಥವಾ ರಾತ್ರಿ ವೇಳೆಯಲ್ಲಿ ನೀರು ಕುಡಿಯಲು ಬಂದ ಆನೆಗಳು ಕೆಸರಿನಲ್ಲಿ ಹೂತು ಕೊಂಡು ಹೊರಬರಲು ಸಾಧ್ಯವಾಗದೆ ಸಾವು ಬದುಕಿನ ಜತೆ ಹೋರಾಡುತ್ತಾ ಗಿಳಾಡುತ್ತಿದ್ದವು ಎನ್ನಲಾಗಿದೆ. ಅದನ್ನು ಅರಣ್ಯ ಇಲಾಖೆಯ ಗಸ್ತು ಸಿಬ್ಬಂದಿ ಭಾನುವಾರ ಮಧ್ಯಾಹ್ನ ಗಮನಿಸಿ, ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆಕೂಡಲೇ ಸ್ಥಳಕ್ಕೆ ಧಾಮಿಸಿದ ಮಲೆ ಮಹದೇಶ್ವರ ವನ್ಯಜೀವಿ ಧಾಮದ ಡಿ.ಸಿ.ಎಫ್ ಭಾಸ್ಕರ್, ಎ.ಸಿ.ಎಫ್ ವಿರಾಜ್ ಹೊಸೂರ್, ವಲಯ ಅರಣ್ಯಾಧಿಕಾರಿ ಜಿತೇಂದ್ರ, ವೈದ್ಯಾಧಿಕಾರಿಗಳು, ಅಗ್ನಿಶಾಮಕ ಠಾಣಾಧಿಕಾರಿ ಮಹೇಶ್ ಹಾಗೂ ಸಿಬ್ಬಂದಿ, ಆನೆಗಳ ರಕ್ಷಣೆಗೆ ಮುಂದಾದರು. ಹಲವು ಗಂಟೆಗಳ ಸತತ ಕಾರ್ಯಾಚರಣೆ ನಡೆಸಿ ಸಂಜೆ ವೇಳೆಗೆ ರಕ್ಷಿಸಿದರು. ಅದರಲ್ಲಿ ಎರಡು ಆನೆಗಳು ಕಾಡಿನೊಳಗೆ ಹೊರಟು ಹೋದವು.

ಆನೆಗಳು ಕೆಸರಿನಲ್ಲಿ ಸಿಲುಕಿದ್ದು ಯಾವಾಗ ಎಂಬ ಖಚಿತ ಮಾಹಿತಿ ಇಲ್ಲ ಎಂಬುದು ಅರಣ್ಯ ಅಧಿಕಾರಿಗಳ ಮಾಹಿತಿ. ಆದರೆ ಹಲವು ಗಂಟೆಗಳ ಕಾಲ ನೀರಿನಲ್ಲಿಯೇ ಇದ್ದಿದ್ದರಿಂದ ಆನೆಗಳು ನಿತ್ರಾಣಗೊಂಡಿದ್ದವು. ಪಶುವೈದ್ಯಾಧಿಕಾರಿಗಳು ಚಿಕಿತ್ಸೆ ನೀಡಿದ ಬಳಿಕ ಚೇತರಿಸಿಕೊಂಡವು ಎನ್ನಲಾಗಿದೆ.

ಕೆಸರಿನಲ್ಲಿ ಸಿಲುಕಿಕೊಂಡು ನಿತ್ರಾಣಗೊಂಡಿದ್ದ ಆನೆಗಳಿಗೆ ಮೊದಲಿಗೆ ಕಲ್ಲಂಗಡಿ, ಕಬ್ಬು ಇನ್ನಿತರ ಆಹಾರ ಪದಾರ್ಥಗಳನ್ನು ಒದಗಿಸಲಾಯಿತು. ಬಳಿಕ ಅರಿವಳಿಕೆ ಚುಚ್ಚುಮದ್ದು ನೀಡಲಾಯಿತು. ನಂತರ ನುರಿತ ಬೋಟ್ ಮ್ಯಾನ್ ಗಳ ಸಹಾಯದಿಂದ ಅರಣ್ಯ, ಅಗ್ನಿಶಾಮಕ ಇಲಾಖಾಧಿಕಾರಿಗಳು ಹಾಗೂ ಸಿಬ್ಬಂದಿ, ತೆಪ್ಪದಲ್ಲಿ ಆನೆಗಳ ಬಳಿ ತೆರಳಿದರು.ಒಂದು ಆನೆಗೆ ಬೆಲ್ಟ್ ಹಾಕಿ ಟ್ರ್ಯಾಕ್ಟರ್ ಸಹಾಯದಿಂದ ಮೇಲಕ್ಕೆ ಎತ್ತಲಾಯಿತು. ಇನ್ನೊಂದು ಆನೆ ಸ್ವಯಂ ಶಕ್ತಿಯಿಂದ ತಾನಾಗಿಯೇ ಕೆಸರಿನಿಂದ ಬಿಡಿಸಿಕೊಂಡು ಕಾಡಿನತ್ತ ಹೊರಟಿತು. ಶಕ್ತಿಹೀನವಾಗಿದ್ದ ಮತ್ತೊಂದು ಆನೆಯನ್ನು ಕೆಸರಿನಿಂದ ಮೇಲೆತ್ತಲು ಸಹಾಯಕ್ಕಾಗಿ ಮತ್ತಿಗೋಡು ಶಿಬಿರದಿಂದ ಸಾಕಾನೆ ಮಹೇಂದ್ರನನ್ನು ಕರೆಸಲಾಯಿತು. ಭಾನುವಾರ ರಾತ್ರಿ



10–00 ಗಂಟೆಯ ವರೆಗೂ ಕಾರ್ಯಾಚರಣೆ ನಡೆಯಿತು.

ಇಂದು ಸೋಮವಾರ ಬೆಳಗ್ಗೆಯಿಂದಲೂ ಸಂಜೆವರೆಗೂ ಶಕ್ತಿಹೀನವಾಗಿದ್ದ ಆನೆಗೆ ಚಿಕಿತ್ಸೆ ಹಾರೈಕೆ ಮಾಡಲಾಗುತ್ತಿದ್ದು. ನೀನು ಚೇತರಿಕೆ ಕಂಡುಬಾರದೆ ಇರುವುದರಿಂದ ಹಾರೈಕೆ ಮುಂದುವರೆದಿದೆ. ಕಾರ್ಯಾಚರಣೆಯಲ್ಲಿ ಡಿ.ಸಿ.ಎಫ್ ಭಾಸ್ಕರ್, ಎ.ಸಿಎಫ್ ವಿರಾಜ್ ಹೊಸೂರು, ವೈದ್ಯಧಿಕಾರಿ ರಮೇಶ್ ತಂಡ, ಹನೂರು, ಹೂಗ್ಯಂ, ಪಿ.ಜಿ ಪಾಳ್ಯ ವಿಭಾಗದ ಆರ್.ಎಫ್.ಓ ಗಳು ಹಾಗೂ ಸಿಬ್ಬಂದಿಗಳು ಇದ್ದರು.

# ವಿಶ್ವಗುರು ಬಸವಣ್ಣ ಜಯಂತಿಗೆ ಸೀಮಿತ ಬೇಡ



**ತಾಳಿಕೋಟಿ: ಏ.21:**ಬಸವ ಜಯಂತಿ ದಿನದಂದು ವಿಶ್ವಗುರು ಬಸವಣ್ಣನನ್ನು ಕೇವಲ ಪೂಜಿಸಿ, ಅದ್ದೂರಿ ಮೆರವಣಿಗೆ ನಡೆಸಿ,ಹಾಡಿ ಹೊಗಳಿದರೆ ಸಾಲದು ಅವನ ಬದುಕಿನ ಆದರ್ಶಗಳು ನಮ್ಮ ಜೀವನದ ಭಾಗವಾಗಬೇಕು ಆಗ ಜಯಂತಿ ಆಚರಣೆಗೆ ಒಂದು ಅರ್ಥ ಬರುತ್ತದೆ ಎಂದು ಜೆಎಸ್‌ಜಿ ಫೌಂಡೇಶನ್ ಕಾರ್ಯದರ್ಶಿ ಸಾಹಿತಿ ಶ್ರೀಕಾಂತ ಪತ್ತಾರ ಹೇಳಿದರು.

ಸೋಮವಾರ ಪಟ್ಟಣದ ಶ್ರೀ ಬಸವೇಶ್ವರ ವೃತ್ತದ ಹತ್ತಿರ ತಾಲೂಕ ಆಡಳಿತ ತಾಲೂಕು ಪಂಚಾಯತ ಪುರಸಭೆ ಹಾಗೂ ಶ್ರೀ ಬಸವೇಶ್ವರ ಉತ್ಸವ ಸಮಿತಿ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು. ಬಸವಣ್ಣ 12ನೇ ಶತಮಾನದಲ್ಲಿ ವಚನ ಸಾಹಿತ್ಯದ ಮೂಲಕ ಸಮ ಸಮಾಜದ ನಿರ್ಮಾಣಕ್ಕೆ ಶ್ರಮಿಸಿದ ವಿಶ್ವದ ಮಹಾನ್ ಚೇತನ. ಅವನನ್ನು ಒಂದು ಜಾತಿಗೆ ಸೀಮಿತಗೊಳಿಸುವುದು ಅಕ್ಷಮ್ಯ ಅಪರಾಧವಾಗಿದೆ. ಎಲ್ಲರೂ ನನ್ನವರೆನ್ನುವ ವಿಶ್ವಭಾತೃತ್ವ ಹಾಗೂ ಎನಗಿಂತ ಕಿರಿಯರಿಲ್ಲ ಎಂಬ ವಿನಮ್ರ ಪ್ರಭಾವದಿಂದ ಜಗತ್ತನ್ನೇ ಬೆಳಗಿದ ಜಗಜ್ಯೋತಿ.ಇಡೀ ವಿಶ್ವಕ್ಕೆ ಕಾಯಕ ತತ್ವವನ್ನು ಸಾರಿದ ಶ್ರೇಷ್ಠ ಮಾನವತಾವಾದಿ ಬಸವಣ್ಣನವರ ಬದುಕಿನ ಅಧ್ಯಯನ ಇಂದಿನ ಅಗತ್ಯವಾಗಿದೆ, ನಮ್ಮ ಯುವ ಪೀಳಿಗೆಗೆ ಅವರ ಚಿಂತನೆಗಳನ್ನು ತಿಳಿಸಿಕೊಡುವ ಕಾರ್ಯ ನಾವೆಲ್ಲರೂ ಒಗ್ಗೂಡಿ ಮಾಡಬೇಕಾಗಿದೆ ಅಂತಹದೊಂದು ಆತ್ಮವಲೋಕನಕ್ಕೆ ಇಂದಿನ ಈ ಜಯಂತಿ ಕಾರ್ಯಕ್ರಮ ಸಾಕ್ಷಿಯಾಗಲಿ ಎಂದು ತಿಳಿಸಿದರು.

ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ.ದಮ್ಮೂರಮಠ ಮಾತನಾಡಿ ವಿಶ್ವದ ಮೊದಲ ಪ್ರಜಾಪ್ರಭುತ್ವ ಅನುಭವ ಮಂಟಪವನ್ನು ಜಾರಿಗೆ ತಂದ ಜಗಜ್ಯೋತಿ ವಿಶ್ವಗುರು ಸಂಸ್ಕೃತಿಕ ನಾಯಕ ಬಸವಣ್ಣನವರನ್ನು ಜಗತ್ತಿಗೆ ಪರಿಚಯಿಸುವ ಕಾರ್ಯ ನಾವೆಲ್ಲರೂ ಮಾಡಬೇಕಾಗಿದೆ ಎಂದರು. ತಹಸಿಲ್ದಾರ್ ಪ್ರದೀಪ ದೇವಗಿರಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.ಸಿಆರ್‌ಸಿ ರಾಜು ವಿಜಾಪುರ ಕಾರ್ಯಕ್ರಮ ನಿರ್ವಹಿಸಿದರು.

ಇದೇ ಸಂದರ್ಭದಲ್ಲಿ ಸಾಹಿತಿ, ಖ್ಯಾತವಾಗ್ಮಿ ಶ್ರೀಕಾಂತ ಪತ್ತಾರ ಹಾಗೂ ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಿದ ಮಹನೀಯರನ್ನು ತಾಲೂಕ ಆಡಳಿತದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾಪಂ ಇಒ ಅನಸೂಯಾ ಚಲವಾದಿ, ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ,ಪಿಎಸ್‌ಐ ಜ್ಯೋತಿ ಖೋತ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗಮೇಶ ದೇಸಾಯಿ, ಸಹಕಾರಿ ಬ್ಯಾಂಕ್ ನಿರ್ದೇಶಕ ಮುರಿಗೆಪ್ಪ ಸರಶಟ್ಟಿ, ಬಾಪುಗೌಡ ಸಂ.ಪಾಟೀಲ, ಬಸವೇಶ್ವರ ಉತ್ಸವ ಸಮಿತಿ ಅಧ್ಯಕ್ಷ ಮಹಾಂತೇಶ ಮುರಾಳ, ಕಾಶಿನಾಥ ಮುರಾಳ, ಆರ್ ಎಸ್ ಪಾಟೀಲ (ಕೂಚಬಾಳ), ಮಾನಸಿಂಗ್ ಕೊಕಟನೂರ,ಇಬ್ರಾಹಿಂ ಮನ್ಸೂರ, ಪ್ರಕಾಶ ಹಜೇರಿ, ಶಿವಶಂಕರ ಹಿರೇಮಠ, ವಿಜಯಸಿಂಗ್ ಹಜೇರಿ, ಪರಶುರಾಮ ತಂಗಡಗಿ, ಪ್ರಭು ಬಿಳೆಭಾವಿ, ರಾಮನಗೌಡ ಬಾಗೇವಾಡಿ, ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಮಹಿಬೂಬ ಕೆಂಭಾವಿ, ಜಗದೀಶ ಬಿಳೆಭಾವಿ, ನಿಂಗಣ್ಣ ಕುಂಟೋಜಿ, ಡಿ.ಕೆ. ಪಾಟೀಲ,ನಾಗೇಶ ಕಟ್ಟಿಮನಿ, ಎಂ.ಕೆ. ಮೇತ್ರಿ,ಮಹಮ್ಮದ್ ಶಫೀಕ ಇನಾಮದಾರ,ನಾಗಪ್ಪ ಚಿನಗುಡಿ, ಅಶೋಕ ಜಾಲವಾದಿ,ರಾಜು ಅಲ್ಲಾಪೂರ,ಬಸವ ಸಮಿತಿಯ ಪದಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ತಾಲೂಕ ಮಟ್ಟದ ಅಧಿಕಾರಿಗಳು ಇದ್ದರು.

ಭಾವಚಿತ್ರದ ಮೆರವಣಿಗೆ: ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ರಾಜವಾಡೆಯಿಂದ ಶ್ರೀ ಬಸವೇಶ್ವರ ವೃತ್ತದವರೆಗೆ ಶ್ರೀ ಬಸವಣ್ಣನವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಿತು.

# ಕರಗ ಮಹೋತ್ಸವ-ತುಂಬಾ ಸಂತೋಷದ ವಿಚಾರ

**ಚಿಕ್ಕಬಳ್ಳಾಪುರ,ಏ21:**ಲೋಕಕಲ್ಯಾಣಕ್ಕಾಗಿ ಕರಗ ಮಹೋತ್ಸವ ಪೆರೆಸಂದ್ರ ಗ್ರಾಮದಲ್ಲಿ ಇಲ್ಲಿನ ಜನತೆ ಸದ್ಧಾ ಭಕ್ತಿಗಳಿಂದ ಏರ್ಪಡಿಸಿರುವುದು ತುಂಬಾ ಸಂತೋಷ ತಂದ ವಿಷಯ ಆಗಿದೆ ಎಂದು ಯುವ ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಕ್ಷಾ ರಾಮಯ್ಯ ತಿಳಿಸಿದರು.

ತಾಲೂಕಿನ ಪೆರೆಸಂದ್ರ ಗ್ರಾಮದಲ್ಲಿ ನಿನ್ನೆ ರಾತ್ರಿ ಶ್ರೀ ಸಪ್ಪಲಮ್ಮ ದೇವಾಲಯ ಸಮಿತಿ ವತಿಯಿಂದ ಏರ್ಪಡಿಸಿದ್ದ ಶ್ರೀ ಧರ್ಮರಾಯರ ಕರಗ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಾಲಕಾಲಕ್ಕೆ ಉತ್ತಮ ಮಳೆ ಹಾಗೂ ಬೆಳೆ ಬಂದು ರೈತರು ಸಮೃದ್ಧಿ ಹೊಂದಬೇಕು ಹಾಗೂ ಸಮೃದ್ಧಿಯಾಗಿ ಮಳೆ ಸುರಿದು ಎಳೆಯನ್ನು ತಂಪು ಮಾಡಬೇಕು ಎಂದು ನಾನು ಕರಗದೇವತೆಯಲ್ಲಿ ಮನಸಾರ ಪ್ರಾರ್ಥಿಸುತ್ತೇನೆ ಈ ಕಾರ್ಯಕ್ರಮಕ್ಕೆ ಬಂದಿರುವುದು ನನಗೆ ತುಂಬಾ ಸಂತೋಷ ತಂದ ವಿಷಯ ಆಗಿದೆ ಎಂದರು.

ಕಾರ್ಯಕ್ರಮದಲ್ಲಿ ಮುಖಂಡರುಗಳಾದ ಚಿಮುಲ್ ನಿರ್ದೇಶಕ ಭರಣಿ ವೆಂಕಟೇಶ್ ಬ್ಲಾಕ್ ಕಾಂಗ್ರೆಸ್ ಸಮಿತಿ ನಿಕಟ ಪೂರ್ವ ಅಧ್ಯಕ್ಷ ಡಿವಿ ರಾಜೇಶ್ ಮುಖಂಡರುಗಳಾದ ಎಸ್ ಪಿ ಶ್ರೀನಿವಾಸ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ನಾಗಭೂಷಣ್ ಅಲ್ಲೂ ಒಳಗೊಂಡಂತೆ ಸ್ಥಳೀಯ ಮುಖಂಡರುಗಳು ದೇವಾಲಯದ ಆಡಳಿತ ಮಂಡಳಿ ಹಾಗೂ ನಾಗರೀಕರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಉತ್ತಮ ತಂತ್ರಜ್ಞಾನ ರೂಪಿಸಿಕೊಳ್ಳಲಿ




**ಕೋಲಾರ,ಏ.21–** ಇಂಜಿನಿಯರಿಂಗ್ ಓದುತ್ತಿರುವ ವಿದ್ಯಾರ್ಥಿಗಳು ಲ್ಯಾಪ್‌ಟಾಪ್ ಪಡೆದು, ಡಿಜಿಟಲ್ ಶಿಕ್ಷಣ, ತಂತ್ರಜ್ಞಾನದಲ್ಲಿ ಉತ್ತಮ ಬೆಳವಣಿಗೆಯನ್ನು ರೂಪಿಸಿಕೊಳ್ಳಬೇಕು, ಇದರಿಂದ ಓದುವ ಸಾಮರ್ಥ್ಯ ಮತ್ತು ದಕ್ಷತೆ ಹೆಚ್ಚುತ್ತದೆ. ಇಂಜಿನಿಯರಿಂಗ್ ವಿದ್ಯಾರ್ಥಿಗಳಾದ ನೀವು ತಂತ್ರಜ್ಞಾನದಲ್ಲಿ ಮುಂಚೂಣಿಯಲ್ಲಿರಬೇಕು. ಹೊಸ ಕೌಶಲ್ಯಗಳನ್ನು ಕಲಿಯಲು ಅವಕಾಶ ಇದ್ದು, ಸ್ವಯಂ ಅಭ್ಯಾಸಕ್ಕೆ ಸುಲಭವಾಗುತ್ತದೆ ಎಂದು ಶ್ಯಾಗತ್ತೂರು ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಎಸ್.ವಿ. ಸುಧಾಕರ್ ತಿಳಿಸಿದರು.

ಶ್ರೀನಿವಾಸಪುರ ತಾಲೂಕಿನ ಶ್ಯಾಗತ್ತೂರು ಹಾಲು ಉತ್ಪಾದಕರ ಸಹಕಾರ ಸಂಘ ಮತ್ತು ರೋಟರಿ ಸಂಸ್ಥೆ, ಕೋಲಾರ ಇವರ ಸಹಯೋಗದೊಂದಿಗೆ ಕಾಯಕವೇ ಕೈಲಾಸ ಎಂಬ ನಾಣ್ಣುಡಿಯಂತೆ ಈ ದಿನ ಬಸವ ಜಯಂತಿಯ ಶುಭದಿನದಂದು ಇಂಜಿನಿಯರಿಂಗ್ ಓದುತ್ತಿರುವ ಮಕ್ಕಳಿಗೆ ಉಚಿತ ಲ್ಯಾಪ್ ಟಾಪ್ ವಿತರಣಾ ಕಾರ್ಯಕ್ರಮದಲ್ಲಿ ಲ್ಯಾಪ್ ಟಾಪ್ ವಿತರಿಸಿ ಮಾತನಾಡಿದ ಸಂಘದ ಅಧ್ಯಕ್ಷ ಎಸ್.ವಿ. ಸುಧಾಕರ್, ಬೆಂಗಳೂರಿನ ರೋಟರಿ ಪಾಮ್‌ವಿಲ್ಲಿ ಸಂಸ್ಥೆಯು 5 ಲ್ಯಾಪ್‌ಟಾಪ್‌ಗಳನ್ನು ಉಚಿತವಾಗಿ ನೀಡಿದ್ದು ಇದರ ಸದುಪಯೋಗವನ್ನು ಪಡೆದುಕೊಂಡು ಉನ್ನತ ವ್ಯಾಸಂಗವನ್ನು ಪಡೆದು ಉನ್ನತ ಹುದ್ದೆಗಳನ್ನು ಪಡೆಯಬೇಕು.

ರೋಟರಿ ಸಂಸ್ಥೆಯ ಪ್ರಮುಖ ಉದ್ದೇಶ ಸಮಾಜದಲ್ಲಿ ಶಿಕ್ಷಣ ಮತ್ತು ಸಮಾನ ಅವಕಾಶಗಳನ್ನು ಇಂಜಿನಿಯರಿಂಗ್ ವಿದ್ಯಾರ್ಥಿಗಳು ಪಡೆದುಕೊಳ್ಳಬೇಕು, ಲ್ಯಾಪ್‌ಟಾಪ್ ವಿತರಣೆ ಮಾಡುತ್ತಿರುವುದು ಒಂದು ಅತ್ಯಂತ ಮಹತ್ವದ ಸಮಾಜಮುಖಿ ಕಾರ್ಯವಾಗಿದೆ, ರೋಟರಿ ಸಂಸ್ಥೆಯ ಈ ಪ್ರಯತ್ನವು ವಿದ್ಯಾರ್ಥಿಗಳ ಭವಿಷ್ಯದ ನಿರ್ಮಾಣಕ್ಕ ದಾರಿದೀಪವಾಗಿದೆ. ಲ್ಯಾಪ್‌ಟಾಪ್ ನೀಡುವುದರಿಂದ ನೀವು ತಂತ್ರಜ್ಞಾನದಲ್ಲಿ ಮುನ್ನಡೆಯಲು ಹಾಗೂ ತಮ್ಮ ಕನಸುಗಳನ್ನು ಸಾಕಾರಗೊಳಿಸಲು ನೆರವಾಗುತ್ತದೆ. ಇದು ಕೇವಲ ಒಂದು ಸಾಧನ ವಿತರಣ ಅಲ್ಲ, ಒಂದು ವಿದ್ಯಾರ್ಥಿಯ ಜೀವನದಲ್ಲಿ ದೊಡ್ಡ ಬದಲಾವಣಯನ್ನು ತರಲು ಅವಕಾಶವಾಗಿದೆ ಎಂದರು.

ಮುಂದಿನ ವಾರ ಕೋಲಾರದ ರೋಟರಿ ಸಂಸ್ಥೆಯಿಂದ ಕಾಮದೇನು ಪ್ರಾಜೆಕ್ಟ್ ಅಡಿಯಲ್ಲಿ ಸೀಮೆ ಹಸುಗಳನ್ನು ವಿಧವೆಯರಿಗೆ, ಬಡ ಸ್ತ್ರೀಯರಿಗೆ ಉಚಿತವಾಗಿ ನೀಡಲಿದ್ದು, ನಮ್ಮ ಮತ್ತು ಸುತ್ತ ಮುತ್ತಲ ಗ್ರಾಮದವರಿಗೂ 25 ಸೀಮೆ ಹಸುಗಳನ್ನು ನೀಡಲಿದ್ದು, ಕೋಲಾರ ಜೋನ್ ನಿಂದ ಒಟ್ಟು 150 ಸೇಮೆ ಹಸುಗಳನ್ನು ನೀಡಲಾಗುತ್ತಿದ್ದು, ಕೋಲಾರ ರೋಟರಿ ಸಂಸ್ಥೆಯಿಂದ ಪ್ರಸಕ್ತ ರೋಟರಿ ವರ್ಷದಲ್ಲಿ 30 ಲಕ್ಷ ರೂಗಳ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕೋಲಾರ ರೋಟರಿ ಸಂಸ್ಥೆಯ ಅಧ್ಯಕ್ಷ ಎಸ್.ಎಂ. ಚಂದ್ರಶೇಖರ್ ಮಾತನಾಡಿ, ರೋಟರಿ ಸಂಸ್ಥೆಯು ಸಾಮಾಜಿಕ ಸೇವಾ ಸಂಸ್ಥೆಯಾಗಿದ್ದು, ರೋಟರಿ ಸಂಸ್ಥೆಗೆ ಎಲ್ಲಿಂದಲೂ ಹಣ ಬರುವುದಿಲ್ಲ, ಆರ್. ಐ. ಡಿಸ್ಟ್ರಿಕ್, ಬೇರೆ ಕಡೆಯಿಂದ ಟೈ ಅಪ್ ಮಾಡಿಕೊಂಡು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ, ರೋಟರಿ ಸಂಸ್ಥೆಯು ಯಾರಿಗೆ ಸೇವೆಯನ್ನು ಸಲ್ಲಿಸಬೇಕು, ವಿಶೇಷವಾಗಿ ಹೆಣ್ಣುಮಕ್ಕಳಿಗೆ ಅದರಲ್ಲೂ ವಿಧವೆಯರಿಗೆ, ಕಾಮದೇನು ಪ್ರಾಜೆಕ್ಟ್, ಹಾಗೆಯೇ ರೋಟರಿ ಸಂಸ್ಥೆಯು ವಿಶೇಷವಾಗಿ ಆರೋಗ್ಯ, ಶಿಕ್ಷಣ, ಪರಿಸರಕ್ಕೆ ಅಧ್ಯತೆ ನೀಡುತ್ತಿದೆ, ಮುಂದಿನ ಜೂನ್ ತಿಂಗಳಿನಲ್ಲಿ ಸರ್ಕಾರಿ ಶಾಲೆಯ ಮಕ್ಕಳಿಗೆ ಉಚಿತವಾಗಿ ಪಠ್ಯಪುಸ್ತಕ, ನೋಟ್ ಪುಸ್ತಕಗಳನ್ನು ನೀಡಲಾಗುವುದು, ಊಟ ಮಾಡಲು ತಟ್ಟೆ, ಲೋಟ, ಬುದ್ದಿ ಮಾಂಧ್ಯ ಮಕ್ಕಳಿಗೆ ಬಟ್ಟೆ, ಜರ್‌ಕಿನ್ ಅನ್ನು 90 ಮಕ್ಕಳಿಗೆ ನೀಡಲಾಗುವುದು, ಎಲ್ಲಾ ಸದಸ್ಯರು ಸೇರಿ ಹಣವನ್ನು ಕ್ರೂಢೀಕರಿಸಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಗ್ರಾಮದ ಹಿರಿಯರಾದ ಬಚ್ಚಿರೆಡ್ಡಿ, ಕೃಷ್ಣೇಗೌಡ, ಡೈರಿಯ ಉಪಾಧ್ಯಕ್ಷರಾದ ವೆಂಕಟರಾಮೇಗೌಡ, ನಿರ್ದೇಶಕರಾದ ಅಮೀರ್‌ಜಾನ್, ಪಟೇಲ್ ಆಂಜನೇಯರೆಡ್ಡಿ, ಶ್ರೀನಿವಾಸ್ ಎಸ್.ಎಂ. ಶ್ರೀನಿವಾಸಗೌಡ, ಪ್ರಮೀಳ, ಭಾಸ್ಕರ್, ನಾರಾಯಣಸ್ವಾಮಿ, ಕೋಳಿ ವೆಂಕಟೇಶ್, ಗ್ರಾ.ಪಂ ಮಾಜಿ ಸದಸ್ಯರಾದ ವಿವೇಕ್, ಮಾಜಿ ನಿರ್ದೇಶಕ ನಾರಾಯಣಸ್ವಾಮಿ, ಮಂಜುನಾಥ್, ಎಲ್ಲಾ ನಿರ್ದೇಶಕರು, ಗ್ರಾಮಸ್ಥರು, ವಿದ್ಯಾರ್ಥಿಗಳಾದ ರಾಘವ್, ಪೃಥ್ವಿರಾಜ್, ವೆನಿಲ, ಮಂಜುನಾಥ್, ಚಿತ್ರ ಮತ್ತು ಪೋಷಕರು ಹಾಜರಿದ್ದರು.

# ಸಂಸತ್ತಿಗೆ ಅನುಭವ ಮಂಟಪವೇ ಆಧಾರ : ಶ್ರೀನಾಥ್

**ಕೋಲಾರ:–** ಅನುಭವ ಮಂಟಪ ಆರಂಭಿಸುವ ಮೂಲಕ ಹನ್ನೊಂದನೇ ಶತಮಾನದಲ್ಲಿ ಭಾರತದ ಪಾರ್ಲಿಮೆಂಟ್ ಪರಿಕಲ್ಪನೆಗೆ ಬುನಾದಿ ಹಾಕಿಕೊಟ್ಟವರು ಬಸವಣ್ಣನವರು ಎಂದು ಭಾರತ ಸೇವಾದಳ ಗೌರವಾಧ್ಯಕ್ಷ ಸಿ.ಎಂ.ಆರ್.ಶ್ರೀನಾಥ್ ಹೇಳಿದರು.



ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿರುವ ಭಾರತ ಸೇವಾದಳ ಜಿಲ್ಲಾ ಕಚೇರಿಯಲ್ಲಿ ಬಸವೇಶ್ವರರ ಜಯಂತಿ ಕಾರ್ಯಕ್ರಮದಲ್ಲಿ ಬಸವಣ್ಣನವರು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ಸಮ ಸಮಾಜದ ಪ್ರತಿಪಾದಕರಾಗಿದ್ದ ಬಸವಣ್ಣನವರು ಸಮಾನತೆ ಕೇವಲ ಸಾಮಾಜಿಕವಾಗಿ ಮಾತ್ರವೇ ಇರಬಾರದು, ಆಡಳಿತ ಯಂತ್ರಾಂಗದಲ್ಲಿಯೂ ಸಮಪಾಲು ಇರಬೇಕು ಎನ್ನುವುದು ಬಸವಣ್ಣನವರ ಆಶಯವಾಗಿತ್ತು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಭಾರತ ಸೇವಾದಳ ಜಿಲ್ಲಾಧ್ಯಕ್ಷ ಕೆ.ಎಸ್.ಗಣೇಶ್ ಮಾತನಾಡಿ, ಬಸವಣ್ಣನವರು ಕೇವಲ ಸಮಾಜ ಸುಧಾರಕರಾಗಿ ಮಾತ್ರವಲ್ಲದೆ ಉತ್ತಮ ಆಡಳಿತಗಾರರಾಗಿದ್ದರು, ಹೊಸ ಸಾಹಿತ್ಯ ಪ್ರಾಕಾರದ ಸೃಷ್ಟಿಕರ್ತ ವಚನಕಾರರಾಗಿದ್ದರು, ಇಡೀ ಜಗತ್ತಿನ ಯಾವುದೇ ಭಾಷೆಯಲ್ಲಿ ವಚನಗಳ ಪರಂಪರೆ ಇಲ್ಲವೆನ್ನುವುದು ಕನ್ನಡ ಭಾಷೆಯ ಹಿರಿಮೆಯಾಗಿದೆ, ಮಹಿಳೆಯರಿಗೆ ಲಿಂಗಾಧಾರಣೆ ಮಾಡಿ ಮಹಿಳಾ ಸಮಾನತೆಯ ಪ್ರತಿಪಾದಕರಾಗಿದ್ದಾರೆ. ನಿತ್ಯವೂ ಇವರ ಒಂದು ವಚನ ಓದಿ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದರು.

ಮಾಲೂರು ತಾಲೂಕು ಭಾರತ ಸೇವಾದಳ ಅಧ್ಯಕ್ಷ ಬಹಾದ್ದೂರ್ ಸಾಬ್ ಮಾತನಾಡಿ, ದೇವರನ್ನು ಒಲಿಸಿಕೊಳ್ಳಬೇಕಾದರೆ ವೇದ, ಮಂತ್ರ ಅರಿತಿರಲೇ ಬೇಕು ಎಂಬುದಿಲ್ಲ, ಸರಳವಾಗಿ ಆತ್ಮಲಿಂಗ ಜಪಿಸಿದರೆ ಸಾಕು ಎಂಬುದನ್ನು ಹೇಳಿಕೊಟ್ಟವರೆಂದರು.

ಭಾರತ ಸೇವಾದಳ ಜಿಲ್ಲಾ ಉಪಾಧ್ಯಕ್ಷ ಜಿ.ಶ್ರೀನಿವಾಸ್ ಮಾತನಾಡಿ, ಬಸವಣ್ಣನವರನ್ನು ಜಯಂತಿಯಂದು ಮಾತ್ರವೇ ನೆನಪಿಸಿಕೊಳ್ಳದೆ, ಅವರು ಹಾಕಿಕೊಟ್ಟ ಆದರ್ಶಗಳನ್ನು ಪಾಲಿಸುವಂತಾಗಬೇಕೆಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಹಾಗೂ ತಾಲೂಕು ಸಮಿತಿ ಪದಾಧಿಕಾರಿಗಳಾದ ಅಪ್ಪಿ ನಾರಾಯಣಸ್ವಾಮಿ, ಗೋಕುಲ ಚಲಪತಿ, ಫಲ್ಗುಣ, ಮಹಮದ್ ಚಾನ್ ಪಾಷಾ ಇತರರು ಹಾಜರಿದ್ದರು.

ಭಾರತ ಸೇವಾದಳ ಜಿಲ್ಲಾ ಸಂಘಟಕ ಎಂ.ಬಿ.ದಾನೇಶ್ ಕಾರ್ಯಕ್ರಮ ನಿರ್ವಹಿಸಿದರು. ಸರ್ವಧರ್ಮ ಪ್ರಾರ್ಥನೆಯಿಂದ ಆರಂಭವಾದ ಕಾರ್ಯಕ್ರಮವು ರಾಷ್ಟ್ರಗೀತೆಯೊಂದಿಗೆ ಸಮಾಪ್ತಿಯಾಯಿತು.

# ಕೆಐಎಡಿಬಿ ವಿಚಾರ ಎನ್‌ಡಿಎ ಕುಟುಂಬ ರಾಜಕೀಯ ವಲಯದಲ್ಲಿ ಮರ್ಯಾದೆ ಹತ್ಯೆ





**ಶಿಡ್ಲಘಟ್ಟ:–ಏ,21–** ಜಂಗಮಕೋಟೆ ಭಾಗದಲ್ಲಿ ಕೆಐಎಡಿಬಿ ಭೂಸ್ವಾಧೀನ ಬಿಜೆಪಿ ಜೆಡಿಎಸ್ ರಾಜಕೀಯ ಜಗ್ಗಾಟಕ್ಕೆ ವೇದಿಕೆ ಸಿದ್ದತೆಯಾಗುವಂತಾದರೆ ರಾಜಕೀಯ ಲಾಭ ಯಾರಿಗೆ ಎಂಬುದು ಆಡಳಿತ ವಲಯದ ಜನ ಪ್ರತಿನಿಧಿಗಳಿಗೆ ಅರ್ಥವಾಗಬೇಕಿದೆ.

ತಾಲ್ಲೂಕಿನ ಜಂಗಮಕೋಟೆ ಕೆಐಎಡಿಬಿ ಭೂಸ್ವಾಧೀನ ವಿಚಾರವು ಇದೀಗ ರಾಜಕೀಯ ವಲಯದಲ್ಲಿ ನಾಲ್ಕು ದಿನಗಳಿಂದ ಬಿರುಸಿನ ಚರ್ಚೆಗೆ ಕಾರಣವಾಗಿದೆ. ವಿಶೇಷವಾಗಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಎನ್‌ಡಿಎ ಮೈತ್ರಿ ಅಡಿಯಲ್ಲಿ ಒಂದೇ ಕುಟುಂಬದಂತೆ ಕಾರ್ಯನಿರ್ವಹಿಸುತ್ತಿದ್ದು ಈಗ ಸ್ಥಳೀಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ.

ಶಿಡ್ಲಘಟ್ಟ ಕ್ಷೇತ್ರದಲ್ಲಿ ಇಂದು ಕೆಐಎಡಿಬಿಗೆ ಭೂಮಿ ಕೊಡುತ್ತೇವೆ, ಭೂಮಿ ಕೊಡುವುದಿಲ್ಲ ಎಂದು ಪರ ವಿರೋಧ ಮಾಡುತ್ತಿರುವ ಎರಡೂ ಕಡೆಯ ರೈತರು ರವಿಕುಮಾರ್ ರವರಿಗೆ ಮತ ಹಾಕಿದ್ದಾರೆ ಯಾರನ್ನೂ ಕಡೆ ಗಣಿಸಿ ಮಾತನಾಡಿಲ್ಲ ಇದುವರಿಗೂ ಎಂದು ಕೆಲವರು ಸಂಸದರ ವಿರುದ್ಧದ ಮಾತುಗಳು ಹಾಡುತ್ತಿದ್ದಾರೆ. ಸಂಸದರ ಕಡೆಯವರು ಸಹ ಚಿಕ್ಕಬಳ್ಳಾಪುರ ಕ್ಷೇತ್ರ ಅಭಿವೃದ್ಧಿಗಾಗಿ ಇನ್ನೂರು ಕೋಟಿಗೂ ಅಧಿಕ ಹಣ ತಂದು ಅಭಿವೃದ್ಧಿ ಮಾಡಿರುವ ನಮ್ಮ ಕೆ ಸುಧಾಕರ್ ಎಂದು ಶಾಸಕರ ವಿರುದ್ಧ ಕಿಡಿ ಕಾರುವಂತ ಹೇಳಿಕೆಗಳು ಕೊಡುತ್ತಿದ್ದಾರೆ.

ಇವರುಗಳ ಮಧ್ಯೆ ಇತ್ತೀಚಿನ ದಿನಗಳಲ್ಲಿ ವಿವಿಧ ಯೂಟ್ಯೂಬ್ ಚಾನೆಲ್‌ಗಳು ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಈ ವಿಚಾರವನ್ನು ವಿಭಿನ್ನ ಬಣ್ಣಗಳಲ್ಲಿ ಪ್ರಸ್ತುತಪಡಿಸಲಾಗುತ್ತಿದೆ. ಕೆಲವರು ಈ ಭೂಸ್ವಾಧೀನವನ್ನು ಅಭಿವೃದ್ಧಿಯ ಹೆಸರಿನಲ್ಲಿ ಸಮರ್ಥಿಸುತ್ತಿದ್ದರೆ, ಇನ್ನೂ ಕೆಲವರು ರೈತರು ಫಲವತ್ತಾದ ಭೂಮಿ ಕಳೆದುಕೊಳ್ಳುವ ಭಯದಲ್ಲಿ ರೈತ ಕುಲದ ಹಿತಾಸಕ್ತಿಗೆ ಧಕ್ಕೆ ತರುವ ನಿರ್ಧಾರ ಎಂದು ಆರೋಪಿಸುತ್ತಿದ್ದಾರೆ.

ಜಂಗಮಕೋಟೆಯಲ್ಲಿ ಫಲವತ್ತಾದ ಭೂಮಿ ಕೆಐಎಡಿಬಿ ಭೂಸ್ವಾಧೀನ ಸಂಭಂದಿಸಿದಂತೆ ರೈತರ ಹೋರಾಟ ರಾಜಕೀಯ ಕಾಳಗಕ್ಕೆ ತಿರುಗಿದೆ. ಶಿಡ್ಲಘಟ್ಟ ತಾಲೂಕು ಜಂಗಮಕೋಟೆ ಪ್ರದೇಶದಲ್ಲಿ ಕೈಗಾರಿಕಾ ಸ್ಥಾಪನೆಗೆ ಭೂಸ್ವಾಧೀನ ವಿಚಾರವಾಗಿ ಹಲವಾರು ತಿಂಗಳುಗಳಿಂದ ನಡೆಯುತ್ತಿದ್ದ ರೈತರ ಪರ–ವಿರೋಧ ಹೋರಾಟ ಇದೀಗ ರಾಜಕೀಯ ಮುಖಾಮುಖಿಗೆ ತಿರುಗಿದೆ. ಕ್ಷೇತ್ರದ ಶಾಸಕರಾದ ಬಿ.ಎನ್. ರವಿಕುಮಾರ್ ಹಾಗೂ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ. ಕೆ. ಸುಧಾಕರ್ ನಡುವಿನ ಮಾತಿನ ಜಿದ್ದಾಜಿದ್ದಿ ತೀವ್ರತೆ ಪಡೆದುಕೊಂಡಿದೆ.

ಶಿಡ್ಲಘಟ್ಟ ತಾಲೂಕಿನಾದ್ಯಂತ ನಿರುದ್ಯೋಗ ಸಮಸ್ಯೆ ಹೆಚ್ಚುತ್ತಿವೆ. ಈಗಾಗಲೇ ಬೆಳಗಾದರೆ ಸಾಕು ಸಾವಿರಾರು ಯುವಕರು, ಯುವತಿಯರು ಉದ್ಯೋಗಕ್ಕಾಗಿ ಹೊರಗೆ ಹೋಗುವಂತಾಗಿದೆ ಅವರಿಗೆಲ್ಲಾ ಸ್ಥಳೀಯವಾಗಿ ಉದ್ಯೋಗ ಸಿಗಲಿ ಎಂಬುದು ಕೆಲವರ ಆಶಯವಾಗಿದೆ.

ಈ ಬೆಳವಣಿಗೆಗಳಿಂದ ಜಂಗಮಕೋಟೆ ಭೂಸ್ವಾಧೀನ ವಿವಾದವು ಕೇವಲ ರೈತರ ಹೋರಾಟವಲ್ಲದೆ, ರಾಜಕೀಯ ಮುಖಾಮುಖಿಯ ವೇದಿಕೆಯಾಗಿರುವುದು ಸ್ಪಷ್ಟವಾಗಿದೆ. ಮುಂದಿನ ದಿನಗಳಲ್ಲಿ ಈ ವಿವಾದ ಯಾವ ತಿರುವು ಪಡೆಯಲಿದೆ ಎಂಬುದನ್ನು ಕಾದು ನೋಡಬೇಕಾಗಿದೆ.

# ಕೈ ವಿರುದ್ಧ ಬಿ.ವೈ.ರಾಘವೇಂದ್ರ ಕಿಡಿ



**ಶಿವಮೊಗ್ಗ:ಏ,21–** ದಕ್ಷಿಣ ಭಾರತದ ರಾಜ್ಯಗಳಿಗೆ ಅನ್ಯಾಯವಾಗುತ್ತದೆ ಎಂಬ ತಪ್ಪು ಕಲ್ಪನೆ ಬಿತ್ತುವ ಮೂಲಕ ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಸುಳ್ಳು ಹೇಳುವ ಮೂಲಕ ಅದನ್ನು ತಡೆಯುವ ಯತ್ನ ಮಾಡಿದವೆಂದು ಸಂಸದ ಬಿ ವೈ ರಾಘವೇಂದ್ರ ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರವು ಪ್ರಸ್ತುತ ಕ್ಷೇತ್ರಗಳ ಸಂಖ್ಯೆಯನ್ನು ಶೇ.50 ರಷ್ಟು ಹೆಚ್ಚಿಸುವ ಭರವಸೆ ನೀಡಿದ್ದರೂ, ಸಾಮಾಜಿಕ ನ್ಯಾಯದ ಈ ಮಸೂದೆಯನ್ನು ಕಾಂಗ್ರೆಸ್ ದುರುದ್ದೇಶದಿಂದ ವಿರೋಧಿಸಿದೆ. ಮಸೂದೆ ಬಿದ್ದಾಗ ಕಾಂಗ್ರೆಸ್ ನಾಯಕರು ವಿಜಯೋತ್ಸವ ಆಚರಿಸಿದ್ದು ಮಹಿಳೆಯರಿಗೆ ಮಾಡಿದ ದೊಡ್ಡ ಅವಮಾನ. ಯುಪಿಐ, ಜನ ಧನ್, ಮತ್ತು ಜಿಎಸ್ಟಿ ಅಂತಹ ಪ್ರತಿಯೊಂದು ಜನಪರ ಯೋಜನೆಗಳನ್ನು ವಿರೋಧಿಸುವುದೇ ಕಾಂಗ್ರೆಸ್‌ನ ಕೆಲಸವಾಗಿದೆ ಎಂದು ಟೀಕಿಸಿದರು.

ಈ ಹಿನ್ನೆಲೆಯಲ್ಲಿ ಏಪ್ರಿಲ್ 16 ಅನ್ನು ದೇಶದ ಪಾಲಿನ ಕರಾಳ ದಿನ ಎಂದ ಬಿವೈ ರಾಘವೇಂದ್ರ ಅವರು, ಕಾಂಗ್ರೆಸ್‌ನ ಈ ವಿರೋಧದ ವಿರುದ್ಧ ಪ್ರತಿ ಮನೆಮನೆಗೂ ಜಾಗೃತಿ ತಲುಪಿಸಲಾಗುವುದು ಎಂದರು.

ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಕಾಂಗ್ರೆಸ್‌ಗೆ ಛೀಮಾರಿ ಹಾಕುವ ಅಭಿಯಾನ ನಡೆಸಲಾಗುವುದು. ಪ್ರಧಾನಿ ಮೋದಿಯವರು ಮಹಿಳಾ ಸಬಲೀಕರಣದ ವಿಷಯದಲ್ಲಿ ಎಂದೂ ಹಿಂದೇಟು ಹಾಕುವುದಿಲ್ಲ, ಈ ಪ್ರಯತ್ನ ಮುಂದುವರಿಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE